ಸಂಪುಟ: 03 ಸಂಚಿಕೆ: 272 ದಿನಾಂಕ: 10-09-2026 ಗುರುವಾರ ಪುಟ: 6 ಬೆಲೆ: 2.00ರೂ.

ಸಂಪಾದಕರು, ಮಾಲೀಕರು: ರಾಧಿಕಾ ಎ.ಆರ್.

RNI:KARKAN/2023/88508, Postal Reg No:L2/RNP-1287/TMR/2025-27

# ಕರ್ನಾಟಕ ಸಕ್ಸಸ್ ನಂ 1

KARNATAKA SUCCESS NO1 Kannada Daily
Email: radhikaarno1@gmail.com Ph: 9380988530
ಕನ್ನಡ ದಿನಪತ್ರಿಕೆ
ಇದು ಸ್ವಾಭಿಮಾನಿಗಳ ಧ್ವನಿ



* ತುಮಕೂರು । ಬೆಂಗಳೂರು ನಗರ । ಬೆಂಗಳೂರು ಗ್ರಾಮಾಂತರ । ಚಿಕ್ಕಬಳ್ಳಾಪುರ । ಹಾವೇರಿ । ಮೈಸೂರು । ಮಂಡ್ಯ । ರಾಮನಗರ । ಚಿತ್ರದುರ್ಗ। ದಾವಣಗೆರೆ । ವಿಜಯನಗರ ಜಿಲ್ಲೆಗಳಲ್ಲಿ ಪ್ರಸಾರ...

## ಪರಿಸರ ಸ್ನೇಹಿ ಗಣೇಶ ಚತುರ್ಥಿ ಆಚರಿಸಲು ಡಿಸಿ ಮನವಿ

ತುಮಕೂರು: ಸ್ವರ್ಣಗೌರಿ ಹಾಗೂ ಗಣೇಶ ಚತುರ್ಥಿ ಹಬ್ಬವನ್ನು ಪರಿಸರ ಸ್ನೇಹಿಯಾಗಿ ಆಚರಿಸಬೇಕೆಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.

ಸಾರ್ವಜನಿಕರು ಗಣೇಶ ಚತುರ್ಥಿ ಹಬ್ಬದ ಆಚರಣೆ ನಂತರ ಪ್ಲಾಸ್ಟರ್ ಆಫ್ ಪ್ಯಾರಿಸ್(ಪಿ.ಒ.ಪಿ) ಮತ್ತು ಬಣ್ಣದ ವಿಗ್ರಹಗಳನ್ನು ಕೆರೆ/ಬಾವಿ ಹಾಗೂ ಇನ್ನಿತರೆ ನೈಸರ್ಗಿಕ ಜಲಮೂಲಗಳಿಗೆ ವಿಸರ್ಜಿಸುವುದರಿಂದ ನೈಸರ್ಗಿಕ ಜಲಮೂಲಗಳು ಕಲುಷಿತಗೊಂಡು ಪರಿಸರದ ಮೇಲೆ ದುಷ್ಪರಿಣಾಮ ಉಂಟಾಗುವುದಲ್ಲದೆ ಪ್ರಾಣಿ, ಪಕ್ಷಿ ಹಾಗೂ ಜಲಚರಗಳ ಜೀವಕ್ಕೆ ಅಪಾಯವಾಗುತ್ತದೆ ಹಾಗೂ ಸಾರ್ವಜನಿಕ ಆರೋಗ್ಯಕ್ಕೂ ಧಕ್ಕೆ ಉಂಟಾಗುತ್ತದೆ.

ಪಿಓಪಿ ಮತ್ತು ಬಣ್ಣ ಲೇಪಿತ ವಿಗ್ರಹಗಳನ್ನು ಇನ್ನು ಮುಂದೆ ರಾಜ್ಯದ ಯಾವುದೇ ಕೆರೆ ಮತ್ತು ಇತರೆ ಜಲ ಮೂಲಗಳಲ್ಲಿ ವಿಸರ್ಜಿಸುವುದನ್ನು ನಿಷೇಧಿಸಲಾಗಿದೆ. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಅಧಿಸೂಚನೆಯನ್ವಯ ಪಿಓಪಿ ವಿಗ್ರಹಗಳನ್ನು ತಯಾರಿಸುವ ಮತ್ತು ಮಾರಾಟ ಮಾಡುವ ವ್ಯಕ್ತಿ/ಸಂಸ್ಥೆಗಳಿಗೆ ವ್ಯಾಪಾರ ಲೈಸನ್ಸ್ ನೀಡಲಾಗುವುದಿಲ್ಲ. ಲೈಸೆನ್ಸ್ ಪಡೆಯದೇ ಅನಧಿಕೃತವಾಗಿ ತಯಾರಿ/ಮಾರಾಟ ಮಾಡುವ ವ್ಯಕ್ತಿ/ಸಂಸ್ಥೆಗಳ ಮೇಲೆ ಕಾನೂನು ಕ್ರಮವನ್ನು ಜರುಗಿಸಲಾಗುವುದು. ಅಧಿಸೂಚನೆಯನ್ವಯ ಪ್ಲಾಸ್ಟರ್ ಆಫ್ ಪ್ಯಾರಿಸ್/ಬಣ್ಣಲೇಪಿತ ವಿಗ್ರಹಗಳನ್ನು ಯಾವುದೇ



ನದಿ/ಕಾಲುವೆ/ಬಾವಿಗಳಲ್ಲಿ ವಿಸರ್ಜಿಸುವುದನ್ನು ನಿಷೇಧಿಸಲಾಗಿದ್ದು, ಈ ಆದೇಶವನ್ನು ಉಲ್ಲಂಘಿಸಿದಲ್ಲಿ ಕಾನೂನು ಪ್ರಕಾರ ಕ್ರಮ ಕೈಗೊಳ್ಳಲಾಗುವುದು.

ಗೌರಿ ಹಾಗೂ ಗಣೇಶ ಹಬ್ಬದ ಸಂದರ್ಭದಲ್ಲಿ ರಾಸಾಯನಿಕ ಬಣ್ಣಗಳಿಂದ ಮಾಡಿದ ಮೂರ್ತಿಗಳ ಬದಲಾಗಿ ನೈಸರ್ಗಿಕ ವಸ್ತುಗಳಿಂದ ತಯಾರಿಸಿದ ಹಾಗೂ ನೈಸರ್ಗಿಕ ಬಣ್ಣ ಲೇಪಿತ ಮೂರ್ತಿಗಳನ್ನು ಪ್ರತಿಷ್ಠಾಪಿಸಿ, ಪೂಜಿಸಿದ ನಂತರ ಸಾಮೂಹಿಕವಾಗಿ ಗುರುತಿಸಿರುವ ಸ್ಥಳಗಳಲ್ಲಿ ಮಾತ್ರ ವಿಸರ್ಜಿಸಬೇಕು. ಮಣ್ಣಿನ ಗಣೇಶ ಮೂರ್ತಿಗಳ ವಿಸರ್ಜನೆ ಸಂದರ್ಭದಲ್ಲಿ ಮೊಬೈಲ್ ಟ್ಯಾಂಕ್‌ಗಳಲ್ಲಿ/ಕಲ್ಯಾಣಿಗಳ ಪಕ್ಕದಲ್ಲಿ ಹಸಿ ಕಸ (ಹೂವು, ಹಣ್ಣು, ಬಾಳೆಕಂಬ, ಮಾವಿನ ತೋರಣ, ಇತ್ಯಾದಿ) ಪ್ರತ್ಯೇಕಿಸಿ ವಿಲೇವಾರಿ ಮಾಡಬೇಕು. ಸಾರ್ವಜನಿಕವಾಗಿ ಇಡಲಾಗುವ ಗಣೇಶ ವಿಗ್ರಹಗಳನ್ನು ಪ್ರತಿ ಸಮಿತಿಯವರು ಕಡ್ಡಾಯವಾಗಿ ಸ್ಥಳೀಯ ಸಂಸ್ಥೆ ಮತ್ತು ಪೋಲೀಸ್ ಇಲಾಖೆಯಿಂದ ನಿಬಂಧನೆಗೊಳಪಟ್ಟ ಅನುಮತಿಯನ್ನು ಪಡೆದ ನಂತರವೇ ಸ್ಥಾಪಿಸಬೇಕು. ರಾತ್ರಿ 10 ರಿಂದ ಬೆಳಿಗ್ಗೆ 6 ಗಂಟೆಯ ಅವಧಿಯಲ್ಲಿ ಧ್ವನಿವರ್ಧಕಗಳ ಬಳಕೆ ನಿಷೇಧಿಸಲಾಗಿದೆ.

ಕರ್ನಾಟಕ ಸರ್ಕಾರದಿಂದ ಈಗಾಗಲೇ ಏಕ ಬಳಕೆಯ ಪ್ಲಾಸ್ಟಿಕ್(ಏಬಳಕ) ವಸ್ತುಗಳ ಉತ್ಪಾದನೆ, ಸಂಗ್ರಹಣೆ, ವಿತರಣೆ, ಮಾರಾಟ ಮತ್ತು ಬಳಕೆಯನ್ನು ನಿಷೇಧಿಸಲಾಗಿದ್ದು, ಗಣೇಶ ಹಬ್ಬದ ಸಂದರ್ಭದಲ್ಲಿ ಸಾರ್ವಜನಿಕ ಗಣೇಶ ಪೆಂಡಾಲ್‌ಗಳಲ್ಲಿ ಬಲೂನ್, ಬಲೂನ್‌ಗಳಿಗೆಬಳಸುವಪ್ಲಾಸ್ಟಿಕ್ ಸ್ಟಿಕ್,ಪ್ಲಾಸ್ಟಿಕ್ ಕ್ಯಾಂಡಿ ಸ್ಟೀಕ್, ಪ್ಲಾಸ್ಟಿಕ್ ಐಸ್‌ಕ್ರೀಮ್ ಸ್ಟಿಕ್, ಅಲಂಕಾರಕ್ಕಾಗಿ ಬಳಸುವ ಪಾಲಿಸ್ಟೈರೀನ್(ಥರ್ಮೋಕೋಲ್)ಗಳನ್ನು ಬಳಸುವಂತಿಲ್ಲ.

ಎಲ್ಲಾ ರೀತಿಯ ಪ್ಲಾಸ್ಟಿಕ್ ಕ್ಯಾರಿ ಬ್ಯಾಗ್ (including Compostable, Bio-degradable and non-woven sacks irrespective of size and thickness) ಪ್ಲಾಸ್ಟಿಕ್ ಧ್ವಜ, ಅಂಟಿಕೊಳ್ಳುವ ಫಿಲ್ಮ್, ಎಲ್ಲಾ ದಪ್ಪದ ಡೈನಿಂಗ್ ಟೇಬಲ್‌ನಲ್ಲಿ ಹರಡಲು ಬಳಸುವ ಪ್ಲಾಸ್ಟಿಕ್ ಹಾಳೆ, ಸ್ಟ್ರಾ, ಪ್ಲಾಸ್ಟಿಕ್ ಮೈಕ್ರೋ ಮಣಿಗಳಿಂದ ಮಾಡಿದ ವಸ್ತು, ಪ್ಲಾಸ್ಟಿಕ್ ಪ್ಲೇಟ್, ಪ್ಲಾಸ್ಟಿಕ್ ಕಪ್ ಮತ್ತು ಲೋಟ, ಫೋರ್ಕ್, ಪ್ಲಾಸ್ಟಿಕ್ ಚಮಚ, ಪ್ಲಾಸ್ಟಿಕ್ ಚಾಕು, ಪ್ಲಾಸ್ಟಿಕ್ ಟ್ರೇ, ಸ್ವೀಟ್ ಬಾಕ್ಸ್ / ಆಮಂತ್ರಣ ಪತ್ರ / ಸಿಗರೇಟ್ ಪ್ಯಾಕೆಟ್‌ಗಳ ಸುತ್ತ ಸುತ್ತುವ ಪದರ ಅಥವಾ ಪ್ಯಾಕಿಂಗ್ ಫಿಲ್ಮ್ ಮತ್ತು ಪ್ಲಾಸ್ಟಿಕ್ ಸ್ಟಿಕರ್‌ಗಳು ನಿಷೇಧಿತವಾಗಿರುವ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿ ಎಲ್ಲೂ ಪ್ಲಾಸ್ಟಿಕ್ ವಸ್ತುಗಳನ್ನು ಬಳಸದಂತೆ ನಿರ್ಬಂಧಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

> ಪಿಓಪಿ ಮತ್ತು ಬಣ್ಣ ಲೇಪಿತ ವಿಗ್ರಹಗಳನ್ನು ಇನ್ನು ಮುಂದೆ ರಾಜ್ಯದ ಯಾವುದೇ ಕೆರೆ ಮತ್ತು ಇತರೆ ಜಲ ಮೂಲಗಳಲ್ಲಿ ವಿಸರ್ಜಿಸುವುದನ್ನು ನಿಷೇಧಿಸಲಾಗಿದೆ. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಅಧಿಸೂಚನೆಯನ್ವಯ ಪಿಓಪಿ ವಿಗ್ರಹಗಳನ್ನು ತಯಾರಿಸುವ ಮತ್ತು ಮಾರಾಟ ಮಾಡುವ ವ್ಯಕ್ತಿ/ಸಂಸ್ಥೆಗಳಿಗೆ ವ್ಯಾಪಾರ ಲೈಸನ್ಸ್ ನೀಡಲಾಗುವುದಿಲ್ಲ. ಲೈಸೆನ್ಸ್ ಪಡೆಯದೇ ಅನಧಿಕೃತವಾಗಿ ತಯಾರಿ/ಮಾರಾಟ ಮಾಡುವ ವ್ಯಕ್ತಿ/ಸಂಸ್ಥೆಗಳ ಮೇಲೆ ಕಾನೂನು ಕ್ರಮವನ್ನು ಜರುಗಿಸಲಾಗುವುದು. ಅಧಿಸೂಚನೆಯನ್ವಯ ಪ್ಲಾಸ್ಟರ್ ಆಫ್ ಪ್ಯಾರಿಸ್/ಬಣ್ಣ ಲೇಪಿತ ವಿಗ್ರಹಗಳನ್ನು ಯಾವುದೇ ನದಿ/ಕಾಲುವೆ/ಬಾವಿಗಳಲ್ಲಿ ವಿಸರ್ಜಿಸುವುದನ್ನು ನಿಷೇಧಿಸಲಾಗಿದ್ದು, ಈ ಆದೇಶವನ್ನು ಉಲ್ಲಂಘಿಸಿದಲ್ಲಿ ಕಾನೂನು ಪ್ರಕಾರ ಕ್ರಮ ಕೈಗೊಳ್ಳಲಾಗುವುದು.

## ಉಚಿತ ಗಾರ್ಮೆಂಟ್ ಟೈಲರಿಂಗ್ ತರಬೇತಿ



ಹುಳಿಯಾರು: ಸ್ಥಳೀಯ ನಿರುದ್ಯೋಗಿ ಯುವಕ-ಯುವತಿಯರಿಗೆ ಉದ್ಯೋಗಾವಕಾಶ ಕಲ್ಪಿಸುವ ನಿಟ್ಟಿನಲ್ಲಿ ಹುಳಿಯಾರಿನ ದುರ್ಗಮ್ಮನ ಗುಡಿ ಬೀದಿಯಲ್ಲಿರುವ ಕಿಯೋನಿಕ್ಸ್ ಕಂಪ್ಯೂಟರ್ ತರಬೇತಿ ಸಂಸ್ಥೆಯ ವತಿಯಿಂದ 2 ತಿಂಗಳ ಉಚಿತ ಗಾರ್ಮೆಂಟ್ ಟೈಲರಿಂಗ್ (ಸಿದ್ಧ ಉಡುಪು ತಯಾರಿಕೆ) ತರಬೇತಿಯನ್ನು ಹಮ್ಮಿಕೊಳ್ಳಲಾಗಿದೆ. 18 ರಿಂದ 45 ವರ್ಷ ವಯೋಮಿತಿಯ ಒಳಗಿನ ಆಸಕ್ತ ನಿರುದ್ಯೋಗಿ ಯುವಕ ಹಾಗೂ ಯುವತಿಯರು ಈ ತರಬೇತಿಯ ಸದುಪಯೋಗಪಡಿಸಿಕೊಳ್ಳಬಹುದಾಗಿದೆ. ತರಬೇತಿ ಪೂರ್ಣಗೊಳಿಸಿದ ಅಭ್ಯರ್ಥಿಗಳಿಗೆ ಜಿಲ್ಲೆಯ ಪ್ರಖ್ಯಾತ ಗಾರ್ಮೆಂಟ್ಸ್‌ಗಳಲ್ಲಿ ಉದ್ಯೋಗ ದೊರಕಿಸಿಕೊಡಲು ಅಗತ್ಯ ನೆರವು ನೀಡಲಾಗುವುದು ಎಂದು ಸಂಸ್ಥೆಯ ಪ್ರಕಟಣೆ ತಿಳಿಸಿದೆ.

ಅರ್ಜಿ ಸಲ್ಲಿಸಲು ಕೊನೆಯ ಸೆ.10 ಆಗಿದ್ದು ಹೆಚ್ಚಿನ ಮಾಹಿತಿಗಾಗಿ ಸಿ.ಎನ್. ಪ್ರಭು, ಕಿಯೋನಿಕ್ಸ್ ಕಂಪ್ಯೂಟರ್ ತರಬೇತಿ ಸಂಸ್ಥೆ, ದುರ್ಗಮ್ಮನ ಗುಡಿ ಬೀದಿ, ಹುಳಿಯಾರು. ಮೊಬೈಲ್ ಸಂಖ್ಯೆ: 9141689595 ಸಂಪರ್ಕಿಸಬಹುದಾಗಿದೆ.

## ರೋಟರಿಯಿಂದ ಶಾಲೆಯಲ್ಲಿ ಕೃಷ್ಣಜನ್ಮಾಷ್ಟಮಿ




ತುಮಕೂರು: ರೋಟರಿ ತುಮಕೂರು ಸೆಂಟ್ರ ಲ್ ಹಾಗೂ ಇನ್ನರ್ ವ್ಹೀಲ್ ತುಮಕೂರು ಸೆಂಟ್ರಲ್ ಸಂಸ್ಥೆಗಳಿಂದ ನಗರದ ಶಾರದಾ ವಿದ್ಯಾ ಸಂಸ್ಥೆ ಶಾಲೆಯಲ್ಲಿ ಕೃಷ್ಣ ಜನ್ಮಾಷ್ಟಮಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಶಾಲಾ ಮಕ್ಕಳು ಬಾಲಕೃಷ್ಣ, ಬಾಲ ರಾಧೆ ವೇಷ ಧರಿಸಿ ಹಾವಭಾವ ಪ್ರದರ್ಶಿಸಿ ಗಮನ ಸೆಳೆದರು. ನಮ್ಮ ಸಂಸ್ಕೃತಿ, ಸಂಪ್ರದಾಯ, ಆಚಾರ, ವಿಚಾರ, ಹಬ್ಬಗಳ ಆಚರಣೆಯ ಮಹತ್ವದ ಬಗ್ಗೆ ಪರಿಚಯಿಸಲು ಈ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಶಾಲಾ ಸಂಸ್ಥೆಯ ಅಧ್ಯಕ್ಷ ನಾಗರಾಜ್ ಶೆಟ್ಟಿ ಹೇಳಿದರು.

ರೋಟರಿ ತುಮಕೂರು ಸೆಂಟ್ರಲ್ ಅಧ್ಯಕ್ಷ ಕೃಷ್ಣಕುಮಾರ್ ಅವರು, ಕೃಷ್ಣ ಜನ್ಮಾಷ್ಟಮಿಯ ವಿಶೇಷತೆ ಬಗ್ಗೆ ಮಕ್ಕಳಿಗೆ ತಿಳಿಸಿದರು. ಇನ್ನರ್ ವ್ಹೀಲ್ ಆಫ್ ತುಮಕೂರು ಸೆಂಟ್ರಲ್ ಅಧ್ಯಕ್ಷೆ ಲೀಲಾವತಿ ಅಶೋಕ್ ಅವರು, ಭವಿಷ್ಯದ ಪ್ರಜೆಗಳಾದ ಮಕ್ಕಳಿಗೆ ಶಿಕ್ಷಣದ ಜೊತೆಗೆ ನಮ್ಮ, ಸಂಸ್ಕೃತಿ, ಸಂಸ್ಕಾರದ ಪರಿಚಯ ಈಗಿನಿಂದಲೇ ಆಗಬೇಕು. ಶಾಲೆಗಳಲ್ಲಿ ಇಂತಹ ಕಾರ್ಯಕ್ರಮಗಳು ಹೆಚ್ಚು ನಡೆಯಲಿ ಎಂದು ಸಲಹೆ ಮಾಡಿದರು.

ಇನ್ನರ್ ವ್ಹೀಲ್ ಸಂಸ್ಥೆ ಕಾರ್ಯದರ್ಶಿ ಪ್ರತಿಭಾ, ಶಾಂತಲಾ ಜಯರಾಮ್, ಪದಾಧಿಕಾರಿಗಳು, ಶಾಲೆಯ ಶಿಕ್ಷಕಿಯರು ಭಾಗವಹಿಸಿದ್ದರು. ಕೃಷ್ಣ, ರಾಧೆ ವೇಷದಲ್ಲಿ ಮನರಂಜಿಸಿದ ಎಲ್ಲಾ ಮಕ್ಕಳಿಗೆ ಪ್ರೋತ್ಸಾಹದಾಯಕವಾಗಿ ಪೆನ್, ಪೆನ್ಸಿಲ್ ಮತ್ತಿತರ ಪಠ್ಯಪರಿಕರ ವಿತರಿಸಲಾಯಿತು.

## ಕನ್ನಾಳೆ ವಜಾಕ್ಕೆ ಆಗ್ರಹಿಸಿ ಎಬಿವಿಪಿ ರಸ್ತೆ ತಡೆದು ಪ್ರತಿಭಟನೆ



ತುಮಕೂರು: KPSC ಪಶು ವೈದ್ಯಾಧಿಕಾರಿ ನೇಮಕಾತಿ ಹಗರಣಕ್ಕೆ ಸಂಬಂಧಿಸಿದಂತೆ ಬಂಧನಕ್ಕೊಳಗಾಗಿರುವ ಆರೋಪ ಎದುರಿಸುತ್ತಿರುವ ತುಮಕೂರು ವಿಶ್ವವಿದ್ಯಾಲಯದ ರಾಜ್ಯಪಾಲರ ನಾಮನಿರ್ದೇಶಿತ ಸಿಂಡಿಕೇಟ್ ಸದಸ್ಯ ಬಸವರಾಜ್ ಕನ್ನಾಳೆ ಅವರನ್ನು ಸಿಂಡಿಕೇಟ್ ಸದಸ್ಯತ್ವದಿಂದ ವಜಾಗೊಳಿಸಬೇಕು ಎಂದು ಆಗ್ರಹಿಸಿ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ (ಎಬಿವಿಪಿ) ವತಿಯಿಂದ ಬುಧವಾರ ನಗರದಲ್ಲಿ ಪ್ರತಿಭಟನೆ ನಡೆಯಿತು. ನಗರದ ಟೌನ್‌ಹಾಲ್ ವೃತ್ತದಲ್ಲಿ ಜಮಾಯಿಸಿದ ವಿದ್ಯಾರ್ಥಿಗಳು ಹಾಗೂ ಕಾರ್ಯಕರ್ತರು ಕನ್ನಾಳೆ ಅವರನ್ನು ಕೂಡಲೇ ಸ್ಥಾನದಿಂದ ವಜಗೊಳಿಸುವಂತೆ ಒತ್ತಾಯಿಸಿದರು.

ಕನ್ನಾಳೆ ಬಂಧನವಾಗಿ ಒಂದು ವಾರ ಕಳೆದಿದ್ದರೂ ಸಿಂಡಿಕೇಟ್ ಸದಸ್ಯತ್ವ ದಿಂದ ವಜಾಗೊಳಿಸದಿರುವುದಕ್ಕೆ ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿ ದರು. ಟೌನ್ ಹಾಲ್ ವೃತ್ತದಲ್ಲಿ ರಸ್ತೆ ತಡೆ ನಡೆಸಿ ಕೆಲಕಾಲ ಪ್ರತಿಭಟನೆ ನಡೆಸಿದ ವಿದ್ಯಾರ್ಥಿಗಳು, ಬಳಿಕ ಮಾನವ ಸರಪಳಿ ನಿರ್ಮಿಸಿ ರಾಜ್ಯಪಾಲರು ಹಾಗೂ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು. ರಸ್ತೆ ತಡೆಯಿಂದ ಸಂಚಾರಕ್ಕೆ ತೊಂದರೆಯಾಗಿದ್ದ ಹಿನ್ನೆಲೆಯಲ್ಲಿ ಪೊಲೀಸರು ಹಾಗೂ ಪ್ರತಿಭಟನಾಕಾರರ ನಡುವೆ ಮಾತಿನ ಚಕಮಕಿ ನಡೆಯಿತು.

ಪ್ರತಿಭಟನೆಯಲ್ಲಿ ಮಾತನಾಡಿದ ಎಬಿವಿಪಿ ತುಮಕೂರು ವಿಭಾಗ ಸಂಚಾಲಕ ಎಚ್.ಆರ್. ಗುರುಪ್ರಸಾದ್, ಬಸವರಾಜ್ ಕನ್ನಾಳೆ ಅವರನ್ನು ರಾಜ್ಯಪಾಲರೇ ತುಮಕೂರು ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯ ರನ್ನಾಗಿ ನಾಮನಿರ್ದೇಶನ ಮಾಡಿದ್ದಾರೆ. ಪಶು ವೈದ್ಯಾಧಿಕಾರಿ ನೇಮಕಾತಿ ಹಗರಣಕ್ಕೆ ಸಂಬಂಧಿಸಿದಂತೆ ಅವರು ಬಂಧನಕ್ಕೊಳಗಾಗಿದ್ದರೂ ಸದಸ್ಯತ್ವದಿಂದ ವಜಾಗೊಳಿಸದಿರುವುದು ಹಲವು ಪ್ರಶ್ನೆಗಳಿಗೆ ಕಾರಣವಾಗಿದೆ ಎಂದು ಹೇಳಿದರು. .

ತುಮಕೂರು ನಗರ ಸಂಘಟನಾ ಕಾರ್ಯದರ್ಶಿ ಸಮನ್ವಿತ್ ಮಾತನಾಡಿ ವಿಶ್ವವಿದ್ಯಾಲಯದಿಂದ ಕನ್ನಾಳೆ ಅವರನ್ನು ವಜಾಗೊಳಿಸುವಂತೆ ಈಗಾಗಲೇ ರಾಜ್ಯಪಾಲರಿಗೆ ಪತ್ರ ಕಳುಹಿಸಲಾಗಿದೆ ಎಂದು ಹೇಳಿದ ಅವರು, ಇದುವರೆಗೆ ಕ್ರಮ ಕೈಗೊಳ್ಳದಿರುವುದಕ್ಕೆ ಕಾರಣವೇನು ಎಂದು ಪ್ರಶ್ನಿಸಿದರು.

ರಾಜ್ಯಪಾಲರು ಕೂಡಲೇ ಮಧ್ಯಪ್ರವೇಶಿಸಿ ಕನ್ನಾಳೆ ಅವರನ್ನು ಸಿಂಡಿಕೇಟ್ ಸದಸ್ಯತ್ವ ದಿಂದ ವಜಾಗೊಳಿಸಬೇಕು ಎಂದು ಎಬಿವಿಪಿ ಮುಖಂಡರು ಒತ್ತಾಯಿಸಿದರು. ಒಂದು ವಾರದೊಳಗೆ ಕ್ರಮ ಕೈಗೊಳ್ಳದಿದ್ದರೆ ಮುಂದಿನ ಹಂತದಲ್ಲಿ ತುಮಕೂರು ವಿಶ್ವವಿದ್ಯಾಲಯಕ್ಕೆ ಬೀಗ ಹಾಕಿ ವಿಶ್ವವಿದ್ಯಾಲಯ ಬಂದ್‌ಗೆ ಕರೆ ನೀಡಲಾಗುವುದು ಎಂದು ಸಂಘಟನೆ ಎಚ್ಚರಿಕೆ ನೀಡಿತು. ನೇಮಕಾತಿ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಕಾಪಾಡಬೇಕು ಹಾಗೂ ಆರೋಪ ಎದುರಿಸುತ್ತಿರುವ ವ್ಯಕ್ತಿಗಳು ವಿಶ್ವವಿದ್ಯಾಲಯದ ಪ್ರಮುಖ ಆಡಳಿತಾತ್ಮಕ ಸ್ಥಾನಗಳಲ್ಲಿ ಮುಂದುವರಿಯದಂತೆ ಕ್ರಮ ವಹಿಸಬೇಕು ಎಂದು ಆಗ್ರಹಿಸಲಾಯಿತು.

ಪ್ರತಿಭಟನೆಯಲ್ಲಿ ಎಸ್. ಲೋಕೇಶ್, ಪ್ರಮುಖ್ ಯಮುನಾ, ಸಮನ್ವಿತ್ ಸೇರಿದಂತೆ ಅರುಣ್, ಚಿರಂತ್, ಸಂಜಯ್, ಚಿನ್ಮಯ್, ಭಗತ್, ಜೀವನ್, ಶಿವಕುಮಾರ್ ಭಾಗವಹಿಸಿದ್ದರು.

## ಪಾಲಿಕೆಯ ಸ್ವಚ್ಛತಾ ಸಿಬ್ಬಂದಿಗೆ ಗೌರವಾರ್ಪಣೆ, ಸೇವಾ ಸ್ಮರಣೆ




ತುಮಕೂರು: ಜೆಸಿಐನ ಪ್ಲಾಸ್ಟಿಕ್ ಮುಕ್ತ ಭಾರತ ಘೋಷಣೆ ಹಿನ್ನೆಲೆಯಲ್ಲಿ ಜೆಸಿ ತುಮಕೂರು ಮೆಟ್ರೊ ಘಟಕದಿಂದ ಬುಧವಾರ ನಗರದ ನಗರಪಾಲಿಕೆ ಸಭಾಂಗಣದಲ್ಲಿ ಜೆಸಿಐ ಸಪ್ತಾಹದ ಮೊದಲ ದಿನಗಳ ಕಾರ್ಯಕ್ರಮ ಉದ್ಘಾಟಗೊಂಡಿತು.

ಇದರ ಪ್ರಯುಕ್ತ ಪ್ಲಾಸ್ಟಿಕ್ ಬಳಕೆ ವಿರುದ್ಧ ಜನಜಾಗೃತಿ ಮೂಡಿಸಲು ಬೀದಿಬದಿ ವ್ಯಾಪಾರಿಗಳಿಗೆ ಕುಡಿಯುವ ನೀರಿನ ಸ್ಟೀಲ್ ಬಾಟೆಲ್ ವಿತರಿಸಲಾಯಿತು. ನಗರ ಸ್ವಚ್ಛತೆಗೆ ಶ್ರಮಿಸುತ್ತಿರುವ ಪಾಲಿಕೆಯ ಪೌರಕಾರ್ಮಿಕರನ್ನು ಸನ್ಮಾನಿಸಿ ಗೌರವಿಸಲಾಯಿತು.

ನಗರಪಾಲಿಕೆಯ ಸಾರ್ವಜನಿಕ ಸಂಪರ್ಕ ಅಧಿಕಾರಿ ತಬ್ಸಮ್ ಜಹರಾ ಅವರು ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಆರೋಗ್ಯವಂತ ಜೀವನಕ್ಕೆ ಸ್ವಚ್ಛತೆ ಮುಖ್ಯ. ಪರಿಸರ ಸ್ವಚ್ಛತೆ ಜೊತೆಗೆ ವಿಕೃತಗೊಳ್ಳದಂತೆ ನಮ್ಮ ಮನಸ್ಸಿನ ಸ್ವಚ್ಛತೆಯನ್ನೂ ಕಾಪಾಡಿಕೊಂಡರೆ ಸೌಹಾರ್ದ ಸಮಾಜ ನಿರ್ಮಾಣ ಸಾಧ್ಯ. ಹುಟ್ಟಿದ ಈ ಸಮಾನಕ್ಕೆ ನಾನು ಏನು ಮಾಡಿದೆ, ಏನು ಕೊಡುಗೆ ಕೊಡಬೇಕು ಎಂದು ಎಲ್ಲರೂ ಚಿಂತನೆ ಮಾಡಬೇಕು. ಸ್ವಾಸ್ಥ್ಯ ಸಮಾಜ ಕಾಪಾಡುವುದು ಎಲ್ಲರ ಜವಾಬ್ದಾರಿ ಎಂದರು. ಪ್ರತಿಯೊಬ್ಬರೂ ಸಾಮಾಜಿಕ ಪ್ರಜ್ಞೆ, ಹೊಣೆಗಾರಿಕೆ ರೂಢಿಸಿಕೊಂಡರೆ ಸಮಾಜದಲ್ಲಿ ಅಪರಾಧ ಪ್ರಕರಣಗಳನ್ನು ಇಲ್ಲದಂತಾಗಿ ಶಾಂತಿ, ಸೌಹಾರ್ದತೆ ಬೆಳೆಯುತ್ತದೆ. ಅಂತಹ ಉತ್ತಮ ವ್ಯಕ್ತಿತ್ವ ಹೊಂದಬೇಕು. ಜೆಸಿಐನಂತಹ ಸಂಸ್ಥೆ ವ್ಯಕ್ತಿತ್ವ ವಿಕಸನ ರೂಪಿಸುವ ಕೆಲಸ ಮಾಡುತ್ತಿವೆ. ಇಂತಹ ಸಂಸ್ಥೆಗಳಲ್ಲಿ ಮಕ್ಕಳು ತೊಡಗಿಕೊಳ್ಳುವಂತೆ ಪೋಷಕರು ಪ್ರೇರೇಪಿಸಬೇಕು ಎಂದು ಸಲಹೆ ಮಾಡಿದರು.

ಜೆಸಿ ತುಮಕೂರು ಮೆಟ್ರೊ ಅಧ್ಯಕ್ಷೆ ಮಮತಾ ರಾಜ್ ಮಾತನಾಡಿ, ಜೆಸಿಐ ಸಪ್ತಾಹದ ಅಂಗವಾಗಿ ಏಳು ದಿನಗಳ ಕಾಲ ಸಮಾಜಸ್ನೇಹಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಈ ಬಾರಿ ಪ್ಲಾಸ್ಟಿಕ್ ಮುಕ್ತ ಭಾರತ ಘೋಷಣೆ ಹಿನ್ನೆಲೆಯಲ್ಲಿ ಅಪಾಯಕಾರಿ ಪ್ಲಾಸ್ಟಿಕ್ ಬಳಕೆ ವಿರುದ್ಧ ಜನಜಾಗೃತಿ ಮೂಡಿಸಲಾಗುತ್ತಿದೆ. ಲಾರಿ ಚಾಲಕರು, ಶ್ರಮಿಕರು ಪ್ಲಾಸ್ಟಿಕ್ ನೀರಿನ ಬಾಟೆಲ್ ಬಳಸುವುದನ್ನು ತಡೆದು ಅವರಿಗೆ ಸ್ಟೀಲ್ ಬಾಟೆಲ್ ವಿತರಿಸಲಾಗುತ್ತದೆ ಎಂದರು.

ನಾಯಕತ್ವ ನಿರ್ಮಾಣ, ಸಾಮಾಜಿಕ ಹೊಣೆಗಾರಿಕೆ, ಸಾಂಸಾರಿಕ ಸಂಬಂಧಗಳ ವೃದ್ಧಿ, ಸಮಾಜದ ಏಳಿಗೆಗೆ ದುಡಿಯುವ ವರ್ಗವನ್ನು ಗೌರವಿಸುವಂತಹ ಕಾರ್ಯಕ್ರಮಗಳನ್ನು ಹಾಕಿಕೊಳ್ಳಲಾಗಿದೆ. ಈ ಬಗ್ಗೆ ವಿವಿಧೆಡೆ ಕಾರ್ಯಕ್ರಮಗಳನ್ನು ರೂಪಿಸಿ ಜನರಲ್ಲಿ ಅರಿವು ಮೂಡಿಸಲಾಗುತ್ತಿದೆ ಎಂದು ಹೇಳಿದರು.

ಜೆಸಿಐನ ರಾಷ್ಟ್ರೀಯ ಉಪಾಧ್ಯಕ್ಷೆ ಯಶಸ್ವಿನಿ ಮಾತನಾಡಿ, ಭಾರತದಲ್ಲಿ ಕ್ಯಾನ್ಸರ್ ಕಾಯಿಲೆ ವೇಗವಾಗಿ ಹರಡುತ್ತಿದೆ. ಕ್ಯಾನ್ಸರ್‌ಗೆ ಪ್ಲಾಸ್ಟಿಕ್ ಬಳಕೆಯೂ ಒಂದು ಕಾರಣ ಆಗಿರುವುದರಿಂದ ಪ್ಲಾಸ್ಟಿಕ್ ಬಳಕೆ ನಿಯಂತ್ರಿಸುವಂತೆ ಜೆಸಿಐ ಸಪ್ತಾಹದಲ್ಲಿ ಆದ್ಯತಾ ಕಾರ್ಯಕ್ರಮ ಹಾಕಿಕೊಳ್ಳಲಾಗಿದೆ. ಇದರ ಜೊತೆಗೆ ಕ್ರಿಯಾಶೀಲ ನಾಗರೀಕರನ್ನು ಸಮಾಜಕ್ಕೆ ಕೊಡುಗೆಯಾಗಿ ನೀಡಬೇಕು ಎಂದು ವ್ಯಕ್ತಿತ್ವ ವಿಕಸನ, ನಾಯಕತ್ವಗುಣ ಬೆಳೆಸುವ ಕಾರ್ಯಕ್ರಮ ರೂಪಿಸಲಾಗಿದೆ ಎಂದು ತಿಳಿಸಿದರು.

ಜೆಸಿ ತುಮಕೂರು ಮೆಟ್ರೋ ನಿಕಟಪೂರ್ವ ಅಧ್ಯಕ್ಷ ಬೆಳ್ಳಿ ಲೋಕೇಶ್ ಮಾತನಾಡಿ, ದಿನನಿತ್ಯ ನಗರವನ್ನು ಸ್ವಚ್ಛಗೊಳಿಸುವ ಮೂಲಕ ಆರೋಗ್ಯವಂತ ಸಮಾಜಕ್ಕೆ ಶ್ರಮಿಸುತ್ತಿರುವ ಪೌರಕಾರ್ಮಿಕರ ಸೇವೆ ಶ್ಲಾಘನೀಯ. ಜನರ ಆರೋಗ್ಯ ಕಾಪಾಡುವ ಪೌರಕಾರ್ಮಿಕರು ತಮ್ಮ ಆರೋಗ್ಯದ ಬಗ್ಗೆಯೂ ಕಾಳಜಿವಹಿಸಬೇಕು. ನಿಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಿ, ಎಸ್‌ಎಸ್‌ಎಲ್‌ಸಿ, ಪಿಯೂಸಿ ಮಕ್ಕಳಿಗೆ ಸಂಸ್ಥೆಯಿಂದ ಪರೀಕ್ಷಾ ಪೂರಕ ತರಬೇತಿ, ಮಾರ್ಗದರ್ಶನ ನೀಡಿ, ಮಕ್ಕಳ ಶಿಕ್ಷಣಕ್ಕೆ ಪ್ರೋತ್ಸಾಹ ನೀಡುವುದಾಗಿ ಹೇಳಿದ ಅವರು, ಪೌರಕಾರ್ಮಿಕರ 8ನೇ ತರಗತಿ ಓದುತ್ತಿರುವ ಮಕ್ಕಳಿಗೆ ತಮ್ಮ ಬೆಳ್ಳಿ ಫೌಂಡೇಶನ್‌ನಿಂದ ನಿಘಂಟು ನೀಡುವುದಾಗಿ ತಿಳಿಸಿದರು.

ಜೆಸಿ ತುಮಕೂರು ಮೆಟ್ರೊ ಕಾರ್ಯದರ್ಶಿ ಸುನಿೇತ್ ರಾಜ್, ಜೆಸಿ ಕಾಮ್ ವಲಯ ಅಧ್ಯಕ್ಷ ಶ್ರೀನಿವಾಸಮೂರ್ತಿ, ಸಪ್ತಾಹದ ಅಧ್ಯಕ್ಷ ಮಧುಸೂದನ್, ನಗರಪಾಲಿಕೆ ಇಂಜಿನಿಯರ್‌ಗಳಾದ ಪಲ್ಲವಿ, ನಿಖಿತಾ, ಪ್ರಿಯಾ ಗೋಕುಲ್, ದೀಪಕ್, ಅನು ರಮೇಶ್, ಲಕ್ಷ್ಮಿ, ಕ್ಷಿತಿಜ ಭಾಗವಹಿಸಿದ್ದರು.

## ದಸರಾ ಮಹೋತ್ಸವ: ಕಲಾ ತಂಡಗಳಿಂದ ಅರ್ಜಿ

ತುಮಕೂರು: ಜಿಲ್ಲಾಡಳಿತದ ವತಿಯಿಂದ ಪ್ರತಿ ವರ್ಷದಂತೆ ಈ ವರ್ಷವು ಅಕ್ಟೋಬರ್ 11 ರಿಂದ 21ರವರೆಗೆ 11 ದಿನಗಳ ಕಾಲ "ತುಮಕೂರು ದಸರಾ ಮಹೋತ್ಸವ-2026" ಅನ್ನು ಸರ್ಕಾರದ ಕಾರ್ಯಕ್ರಮವನ್ನಾಗಿ ಆಚರಣೆ ಮಾಡಲಾಗುತ್ತಿದ್ದು, ಈ ಸಂಬಂಧ ನಾಡಹಬ್ಬದ ಆಚರಣೆಯ ವಿವಿಧ ವೇದಿಕೆ ಕಾರ್ಯಕ್ರಮ ಹಾಗೂ ಮೆರವಣಿಗೆ ಕಾರ್ಯಕ್ರಮಗಳಲ್ಲಿ ಸಾಂಸ್ಕೃತಿಕ ಪ್ರದರ್ಶನ ನೀಡಲು ಕಲಾ ತಂಡಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಪ್ರದರ್ಶನ ಕಲೆಗಳಲ್ಲಿ ಉತ್ತಮ ವೇಷಭೂಷಣ ಹಾಗೂ ವಾದ್ಯ ಪರಿಕರಗಳನ್ನು ಒಳಗೊಂಡ ತಂಡಕ್ಕೆ ಆದ್ಯತೆ ನೀಡಲಾಗುವುದು. ಈ ಕುರಿತು ಅರ್ಜಿಯೊಂದಿಗೆ ತಂಡದ ಉತ್ತಮ ಛಾಯಾಚಿತ್ರ ಹಾಗೂ ವೇದಿಕೆ ಕಲಾತಂಡಗಳಲ್ಲಿ ಈ ಹಿಂದಿನ ದಿನಗಳಲ್ಲಿ ವಿವಿಧ ವೇದಿಕೆಗಳಲ್ಲಿ ನೀಡಿರುವ ಕಾರ್ಯಕ್ರಮಗಳ ಆಯ್ದ ಛಾಯಾಚಿತ್ರಗಳನ್ನು ಲಗತ್ತಿಸಬೇಕು. ತಂಡದ ಆಯ್ಕೆಯು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ತುಮಕೂರು ದಸರಾ ಆಚರಣಾ ಸಮಿತಿ ಅಧ್ಯಕ್ಷರ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ಸಮಿತಿಯ ನಿರ್ಣಯಕ್ಕೆ ಬದ್ಧವಾಗಿರುತ್ತದೆ.

ಅರ್ಜಿಯನ್ನು ಸ್ವಬರಹದಡಿ ತಂಡದ ಎಲ್ಲಾ ಸದಸ್ಯರ ಹೆಸರು / ವಿವರಗಳೊಂದಿಗೆ ಸಹಾಯಕ ನಿರ್ದೇಶಕರ ಕಚೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ತುಮಕೂರು(0816-2275204) ಕಚೇರಿಗೆ ಸೆಪ್ಟೆಂಬರ್ 19ರೊಳಗಾಗಿ ಸಲ್ಲಿಸಬೇಕೆಂದು ಪ್ರಕಟಣೆ ತಿಳಿಸಿದೆ.

# ಶ್ರೀದೇವಿ ಫಾರ್ಮಸಿ ಕಾಲೇಜಿನಲ್ಲಿ "ಶ್ರೀಸಂಸ್ಕೃತಿ ಉತ್ಸವ"

ತುಮಕೂರು: ವ್ಯಕ್ತಿಯ ಆರೋಗ್ಯದ ಸಂಪೂರ್ಣ ಮಾಹಿತಿ ನೀಡುವ 'ಅಬಾ ಡಿಜಿಟಲ್ ಹೆಲ್ತ್‌ಕಾರ್ಡ್' ಮುಂದಿನ ದಿನಗಳಲ್ಲಿ ಕಡ್ಡಾಯವಾಗಲಿದೆ ಎಂದು ರಾಜೀವ್ ಗಾಂಧಿ ಆರೋಗ್ಯ ವಿಶ್ವವಿದ್ಯಾಲಯದ ಫಾರ್ಮಸಿ ವಿಭಾಗದ ಡೀನ್ ಡಾ.ಶಿವಕುಮಾರ್ ಸ್ವಾಮಿ ಹೇಳಿದ್ದಾರೆ.

ಶ್ರೀದೇವಿ ಕಾಲೇಜಿನಲ್ಲಿ ಬುಧವಾರ ಏರ್ಪಡಿಸಿದ್ದ ಶ್ರೀಸಂಸ್ಕೃತಿ ಉತ್ಸವ– 2026 ಕಾರ್ಯಕ್ರಮದಲ್ಲಿ ಅವರು ಈ ವಿಷಯ ತಿಳಿಸಿದರು. ದೇಶದ 140 ಕೋಟಿ ಜನರಲ್ಲಿ ಆಧಾರ್ ಕಾರ್ಡ್ ಇರುವಂತೆ ಮುಂದಿನ ಕೆಲವೇ ತಿಂಗಳ ಅವಧಿಯಲ್ಲಿ ಕೇಂದ್ರ ಸರ್ಕಾರ ಪ್ರತಿಯೊಬ್ಬ ವ್ಯಕ್ತಿಯ ಆರೋಗ್ಯ ಮಾಹಿತಿಯನ್ನು ಕಲೆ ಹಾಕುವ ಉದ್ದೇಶದಿಂದ ಇದನ್ನು ಕಡ್ಡಾಯಗೊಳಿಸಲಿದೆ. ಇದರಿಂದ ವ್ಯಕ್ತಿಯ ಆರೋಗ್ಯದ ಸಂಪೂರ್ಣ ಚಿತ್ರಣ ಲಭ್ಯವಾಗಲಿದ್ದು, ಅವರ ಚಿಕಿತ್ಸೆ ಮತ್ತು ತಪಾಸಣೆ ಸುಲಭವಾಗಲಿದೆ. ಆರೋಗ್ಯ ವೃತ್ತಿಪರರಿಗೆ ಹೇರಳ ಉದ್ಯೋಗಾವಕಾಶ ಲಭ್ಯವಾಗಲಿದೆ ಎಂದು ಅವರು ಹೇಳಿದರು. ಆಧಾರ್ ಕಾರ್ಡ್‌ಗೆ 12 ಸಂಖ್ಯೆಗಳು ಇದ್ದರೇ, ಆಯುಷ್ಮಾನ್ ಭಾರತ್ ಡಿಜಿಟಲ್ ಮಿಷನ್ ಅಡಿಯಲ್ಲಿ ನೀಡಲಾಗುವ ಅಬಾ ಕಾರ್ಡ್ 14 ಅಂಕಿಯ ವಿಶಿಷ್ಟ ಆರೋಗ್ಯ ಗುರುತಿನ ಚೀಟಿಯಾಗಲಿದೆ ಎಂದರು. ಅಧ್ಯಾಪಕರು ಮತ್ತು ವಿದ್ಯಾರ್ಥಿಗಳಿಗೆ ಕೌಶಲ್ಯ ಆಧಾರಿತ ಶಿಕ್ಷಣ ನೀಡುವ ಉದ್ದೇಶದಿಂದ ರಾಜೀವ್ ಗಾಂಧಿ ವಿಶ್ವವಿದ್ಯಾಲಯದಲ್ಲಿ 25 ಕೋಟಿ ರೂಪಾಯಿ ವೆಚ್ಚದಲ್ಲಿ ಅತ್ಯಾಧುನಿಕ ಕೌಶಲ್ಯ ಪ್ರಯೋಗಾಲಯ ಸ್ಥಾಪನೆ ಮಾಡುವುದಾಗಿಯೂ ತಿಳಿಸಿದರು. ವೃತ್ತಿಯಲ್ಲಿ ಉಳಿಯಬೇಕಾದರೆ ಮತ್ತು ಗಟ್ಟಿಯಾಗಬೇಕಾದರೆ ವಿದ್ಯಾರ್ಥಿಗಳು ನಾವಿನ್ಯತೆ ಮತ್ತು ಕೌಶಲ್ಯವನ್ನು ಗಳಿಸಿಕೊಳ್ಳಬೇಕು. ಇಲ್ಲವಾದರೆ ಭವಿಷ್ಯದ ಭವಿಷ್ಯ ಮಂಕಾಗಲಿದೆ ಎ.ಐ, ಎಂ.ಎಲ್, ಗೂಗಲ್ ಮತ್ತು ಪೈಥಾನ್ ಕ್ಷೇತ್ರಗಳಲ್ಲಿ ಹೆಚ್ಚು ಕೌಶಲ್ಯ ಬೆಳೆಸಿಕೊಂಡರೆ ವೃತ್ತಿಯಲ್ಲಿ ಎತ್ತರಕ್ಕೆ ಬೆಳೆಯಬಹುದು ಎಂದರು.




ಮುಖ್ಯಅತಿಥಿಗಳಾಗಿದ್ದ ಚಿತ್ರದುರ್ಗದ ಎಸ್.ಜೆ.ಎಂ ವಿಶ್ವವಿದ್ಯಾಲಯದ ರಿಜಿಸ್ಟರ್ ಡಾ.ಎಂ.ಎಸ್. ಗಣಾಚಾರಿ ಮಾತನಾಡಿ, ಕೃತಕ ಬುದ್ಧಿಮತ್ತೆ ಶಿಕ್ಷಕರನ್ನು ಬದಲಾಯಿಸಲು ಸಾಧ್ಯವಿಲ್ಲ. ವಿದ್ಯಾರ್ಥಿಗಳು ಕೇವಲ ಸಿಲಿಬಸ್‌ಗೆ ಸೀಮಿತವಾಗಿ ಅಭ್ಯಾಸ ಮಾಡುವ ಹಳೆಯ ಸಂಪ್ರದಾಯದಿಂದ ಹೊರಬಂದು ಜ್ಞಾನ ಸಂಪಾದನೆಗಾಗಿ ಹೊಸ–ಹೊಸ ವಿಚಾರ ತಿಳಿದುಕೊಳ್ಳಬೇಕು ಎಂದು ಹೇಳಿದರು. ಹಿಂದೆ ಫಾರ್ಮಸಿ ಮಾಡಿದ್ದಾರೆ ಎಂದರೆ ಅವರು ಮೆಡಿಕಲ್ ಶಾಪ್ ತೆರೆಯುತ್ತಾರೆ ಎಂಬ ಭಾವನೆ ಜನರಲ್ಲಿ ಬೇರೂರಿತ್ತು. ಆದರೆ ಬದಲಾದ ಕಾಲಘಟ್ಟದಲ್ಲಿ ಫಾರ್ಮಸಿ ಪದವೀಧರರು ಬೇಕಾದಷ್ಟು ಉದ್ಯೋಗ ಪಡೆಯುವ ಸಂಶೋಧನೆ ಮಾಡುವ ವಿಜ್ಞಾನಿಗಳಾಗುವ ಅವಕಾಶ ಹೇರಳವಾಗಿದೆ. ಕೃತಕ ಬುದ್ಧಿಮತ್ತೆಯಿಂದ ಫಾರ್ಮಸಿ ವೃತ್ತಿಪರರ ಭವಿಷ್ಯ ಉಜ್ವಲವಾಗಲಿದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶ್ರೀದೇವಿ ಶಿಕ್ಷಣ ಸಂಸ್ಥೆಯ ಮಾನವ ಸಂಪನ್ಮೂಲ ವಿಭಾಗದ ನಿರ್ದೇಶಕ ಎಂ.ಎಸ್. ಪಾಟೀಲ್ ಮಾತನಾಡಿ, ಭಾರತ ಜನರಿಕ್ ಔಷಧ ತಯಾರಿಕಾ ರಾಜಧಾನಿ ಎಂಬ ಬಿರುದುಗಳಿಸಿದ್ದು, ಫಾರ್ಮಸಿ ಪದವೀಧರರಿಗೆ ಹೇರಳ ಉದ್ಯೋಗಗಾವಕಾಶ ದೊರಲಿದೆ ಎಂದು ಹೇಳಿದರು. ಪಠ್ಯ, ಪಠ್ಯೇತರ ಚಟುವಟಿಕೆಗಳಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಬಹುಮಾನ ನೀಡಿ ಗೌರವಿಸಲಾಗಿತು. ಶ್ರೀದೇವಿ ಔಷಧ ವಿಜ್ಞಾನ ಮಹಾವಿದ್ಯಾಲಯ ನಿರ್ದೇಶಕ ಡಾ.ಬಿ.ಗೋಪಾಲಕೃಷ್ಣ ಹಾಗೂ ಕಾಲೇಜಿನ ಪ್ರಾಂಶುಪಾಲ ಡಾ.ಶಿವಕುಮಾರ್ ಹಾಜರಿದ್ದರು. ಸಂಜೆ ಖ್ಯಾತಗಾಯಕರಾದ ನಿಶಾನ್ ರೈ ಹಾಗೂ ಪೃಥ್ವಿ ಭಟ್‌ರವರಿಂದ ಸಾಂಸ್ಕೃತಿಕ ಕಾರ್ಯಕ್ರಮ ಜರುಗಿತು.

# ವಿವಿಧ ಕ್ರೀಡೆಯಲ್ಲಿ ಸಾಧನೆ



ಮಧುಗಿರಿ. ಈ ವರ್ಷ ಶೈಕ್ಷಣಿಕ ಸಾಲಿನಲ್ಲಿ ಪ್ರಾರಂಭವಾದ ವರ್ಷ ದಲ್ಲಿ ಪಟ್ಟಣದ ಗೌತಮ್ ಬುದ್ಧ ಪದವಿ ಪೂರ್ವ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿರುವ ಅಖಿಲ್ ದೇವರಾಜ್ ವಿದ್ಯಾರ್ಥಿಯು ಹಲವು ವೈಯಕ್ತಿಕ ಆಟಗಳಲ್ಲಿ ಗೆಲುವು ಸಾಧಿಸಿದ್ದಾರೆ.

ಪಟ್ಟಣದ ಸಮೀಪವಿರುವ ಸಿದ್ದಾಪುರ ಗ್ರಾಮದ ಕೆಕೆ ಮೈದಾನ ದಲ್ಲಿ ನಡೆದ 2026. 2027 ನೇ ಶೈಕ್ಷಣಿಕ ಸಾಲಿನ ತಾಲ್ಲೂಕ್ ಮಟ್ಟದ ಪದವಿ ಪೂರ್ವ ಕಾಲೇಜುಗಳ ಕ್ರೀಡಾಕೂಟದಲ್ಲಿ ತಾಲೂಕಿನ 22 ಕಾಲೇಜುಗಳಿಂದ ಸುಮಾರು 200 ಕ್ರೀಡಾಪಟುಗಳು ಭಾಗವಹಿಸಿದ್ದರು.

ಮಧುಗಿರಿ ತಾಲೂಕಿನಲ್ಲಿ ತುಂಬಾ ಹೆಸರುವಾಸಿಯಾಗಿರುವ ಗೌತಮ್ ಬುದ್ಧ ಪದವಿ ಪೂರ್ವ ಕಾಲೇಜಿನಲ್ಲಿ ಮಧುಗಿರಿ ತಾಲೂಕು ಐ ಡಿ ಹಳ್ಳಿ ಹೋಬಳಿ ಬ್ರಹ್ಮಸಮುದ್ರ ಗ್ರಾಮದ ವಿದ್ಯಾರ್ಥಿ ಅಖಿಲ್ ದೇವರಾಜ್ ಈಗಾಗಲೇ ಹೋಬಳಿ ಮಟ್ಟದ ಕ್ರೀಡಾ ಕೂಟಗಳಲ್ಲಿ ಹಾಗೂ ತಾಲೂಕು ಮಟ್ಟದ ಕ್ರೀಡಾಕೂಟಗಳಲ್ಲಿ ಹೆಚ್ಚು ಹೆಚ್ಚು ಕ್ರೀಡೆಗಳಲ್ಲಿ ಭಾಗವಹಿಸಿ ಪ್ರಥಮ ಸ್ಥಾನ ಗಳಿಸಿ ಜಿಲ್ಲಾ ಮಟ್ಟಕ್ಕೆ ರಾಜ್ಯಮಟ್ಟಕ್ಕೆ ಆಯ್ಕೆಯಾಗಿರುತ್ತಾನೆ. ಇವರ ತಂದೆಯಾದ ದೇವರಾಜ್ ರವರು ಕೂಡ ಬಾಲ್ಯದಿಂದಲೂ ಕ್ರೀಡೆಗಳಲ್ಲಿ ಭಾಗವಹಿಸಿ ಇವರು ಕೂಡ ಉತ್ತಮ ಕ್ರೀಡಾಪಟುವಾಗಿ ಹೊರಹೊಮ್ಮಿ ಇರುತ್ತಾರೆ ಅದೇ ರೀತಿ ಇವರ ಮಗನಾದ ಅಖಿಲ್ ದೇವರಾಜ್ ಕೂಡ ವಿದ್ಯಾರ್ಥಿ ದೆಸೆಯಿಂದಲೂ ಹಲವು ವೈಯಕ್ತಿಕ ಆಟಗಳಲ್ಲಿ ಭಾಗವಹಿಸಿ ಗೆಲುವು ಸಾಧಿಸಿ ರಾಜ್ಯಮಟ್ಟಕ್ಕೆ ಆಯ್ಕೆಯಾಗುವುದರ ಮೂಲಕ ಮೊದಲ ವರ್ಷದಲ್ಲಿಯೇ ಗಣನೀಯ ಸಾಧನೆ ಮಾಡಿರುತ್ತಾನೆ. ಈ ವಿದ್ಯಾರ್ಥಿಯನ್ನು ತಾಲೂಕಿನ ಕ್ರೀಡಾ ಅಭಿಮಾನಿಗಳು ಮತ್ತು ನಾಗರಿಕರ ಮೆಚ್ಚುಗೆಗೆ ಪಾತ್ರರಾಗಿದ್ದಾರೆ. ಅಖಿಲ್ ದೇವರಾಜು ಅಥ್ಲೆಟಿಕ್ಸ್ 1500 ಮೀಟರ್ ಓಟ ಪ್ರಥಮ ಸ್ಥಾನ 800 ಮೀಟರ್ ಓಟದಲ್ಲಿ ಪ್ರಥಮ ಹಾಗೂ ಉದ್ದ ಜಿಗಿತ ದಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಯಾಗಿರುತ್ತಾರೆ. ತಾಲೂಕು ಮಟ್ಟದ ಕ್ರೀಡೆಯಲ್ಲಿ ಗಮನಾರ್ಹ ಸಾಧನೆ ಮಾಡಿರುವ ವಿದ್ಯಾರ್ಥಿ ಅಖಿಲ್ ದೇವರಾಜ್ ರವರನ್ನು ತರಬೇತುದಾರ ದೈಹಿಕ ಶಿಕ್ಷಕರಾದ ಮಧು ಕಾಲೇಜಿನ ಪ್ರಾಂಶುಪಾಲರಾದ ಶ್ರೀನಿವಾಸ್ ಆಡಳಿತ ಮಂಡಳಿ ಹಾಗೂ ಗ್ರಾಮಸ್ಥರು ಇಂತಹ ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ಇನ್ನು ಹೆಚ್ಚು ಹೆಚ್ಚು ಕ್ರೀಡಾಕೂಟಗಳಲ್ಲಿ ಭಾಗವಹಿಸಿ ರಾಜ್ಯ ಮತ್ತು ರಾಷ್ಟ್ರಮಟ್ಟ ದಲ್ಲಿ ಭಾಗವಹಿಸಲು ದೇವರು ಕರುಣಿಸಲೆಂದು ಅಭಿನಂದಿಸಿದ್ದಾರೆ.

# ಬಡತನ ಮೆಟ್ಟಿ ಸಾಧಕರಾಗಿ




ಕುಣಿಗಲ್: ಪದವಿ ಶಿಕ್ಷಣ ವೃತ್ತಿಜೀವನದ ಅತ್ಯಂತ ಅಮೂಲ್ಯವಾದ 3 ವರ್ಷಗಳ ಪಯಣ ಪ್ರಾರಂಭದ ದಿನ. ಬಡತನ, ಹಸಿವನ್ನು ಮೆಟ್ಟಿ ಸಾಧಕರಾಗಿ, ಭವಿಷ್ಯದ ಹೊಸದಾರಿ, ಹೊಸ ಅವಕಾಶಗಳನ್ನರಿಸುವ ಅಡಿಪಾಯ ಎಂದು ತುಮಕೂರು ವಿಶ್ವವಿದ್ಯಾನಿಲಯದ ಪರೀಕ್ಷಾಂಗ ಕುಲಸಚಿವರಾದ ಪ್ರೊ.ಮೋಹನ್ ಚಂದ್ರಗುತ್ತಿ ಕರೆ ನೀಡಿದರು.

ಅವರು ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಐ.ಕ್ಯೂ.ಎ.ಸಿ. ವತಿಯಿಂದ ಏರ್ಪಡಿಸಿದ್ದ ಹೊಸದಿಗಂತ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಹೊಸದಿಗಂತ ಕಾರ್ಯಕ್ರಮವು ಪದವಿ ವಿದ್ಯಾರ್ಥಿಗಳಿಗೆ ಪದವಿ ಶಿಕ್ಷಣಕ್ಕೆ ಆತ್ಮವಿಶ್ವಾಸದ ಪ್ರಾರಂಭವಾಗಿದೆ. ತರಗತಿಯಲ್ಲಿ ದೊರೆಯುವ ಜ್ಞಾನ ಬಳಸಿ, ಶಿಕ್ಷಕರ ಮಾರ್ಗದರ್ಶನದಿಂದ ಪ್ರತಿಭಾವಂತರಾಗಿ, ಪೋಷಕರು ನಿಮ್ಮ ಮೇಲೆ ಕಟ್ಟಿದ ಆಶಾಗೋಪುರವನ್ನು ನನಸಾಗಿಸಿ, ಬದುಕಿಗೊಂದು ಗುರಿಯಿಟ್ಟು, ಸತತ ಪರಿಶ್ರಮ, ನಿರಂತರ ಅಧ್ಯಯನದಿಂದ ಉಜ್ವಲ ಭವಿಷ್ಯ ರೂಪಿಸಿಕಳ್ಳಬೇಕೆಂದರು.

ಐ.ಕ್ಯೂ.ಎ.ಸಿ. ಸಂಚಾಲಕರಾದ ಡಾ.ಟಿ.ಎನ್. ನರಸಿಂಹಮೂರ್ತಿ ಪ್ರಾಸ್ತಾವಿಕವಾಗಿ ಮಾತನಾಡಿ, ಕಾಲೇಜು ಶಿಕ್ಷಣ ಇಲಾಖೆಯ ಮಹತ್ವಾಕಾಂಕ್ಷೆಯ ಹೊಸದಿಗಂತ ಕಾರ್ಯಕ್ರಮವು ಪ್ರಥಮ ವರ್ಷದ ಪದವಿ ವಿದ್ಯಾರ್ಥಿಗಳನ್ನು ಭವಿಷ್ಯದ ಸವಾಲುಗಳಿಗೆ ಅಣಿಗೊಳಿಸುವ ಆರು ದಿನಗಳ ಕಾರ್ಯಕ್ರಮವಾಗಿದೆ. ಆದುದರಿಂದ ವಿದ್ಯಾರ್ಥಿಗಳು ಕಲಿಕೆಯತ್ತ ಚಿತ್ತ ಹರಿಸಿ, ಸಮಯ ಪಾಲನೆ, ಆತ್ಮವಿಶ್ವಾಸದ ಭರವಸೆಯಿಂದ ಮುನ್ನಡೆಯಿರಿ. ಕನಸುಗಳಿಲ್ಲದ ಜೀವನ ವ್ಯರ್ಥ, ಆದುದರಿಂದ ಕನಸುಕಟ್ಟಿ ಅಧ್ಯಯನಶೀಲರಾಗಿ ಎಂದರು.

ಪ್ರಾಂಶುಪಾಲರಾದ ಪ್ರೊ.ರಾಮಾಂಜನಪ್ಪ ಅಧ್ಯಕ್ಷತೆ ವಹಿಸಿ ಮಾತನಾಡಿ ಪ್ರೌಢ ಶಿಕ್ಷಣ ಮುಗಿಸಿ ಪದವಿ ಅಧ್ಯಯನಕ್ಕೆ ಬರುವ ಹದಿಹರೆಯದ ಯುವಜನರು, ಸಾಮಾಜಿಕ ವ್ಯಾಮೋಹಗಳಿಗೆ ಬಲಿಯಾಗದೇ ತಮ್ಮ ಜವಾಬ್ದಾರಿ ಅರಿಯಿರಿ. ಹೊಸದಿಗಂತ ಕಾರ್ಯಕ್ರಮವು ಜೀವನ ಕೌಶಲ್ಯಗಳು, ಡಿಜಿಟಲ್ ಸಾಕ್ಷರತೆ, ಗುರಿ ನಿರ್ಧರಿಸುವ ಸಾಮರ್ಥ್ಯವೃದ್ಧಿ, ನಿಮ್ಮ ಶಕ್ತಿ ಅರಿಯುವಂತೆ ಮಾಡುತ್ತದೆ. ಯುವಜನರು ತಮ್ಮ ಬದುಕನ್ನು ಕಟ್ಟಿಕೊಳ್ಳುವ, ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತಯಾರಾಗಲು ಶಿಸ್ತುಬದ್ಧ ಜೀವನಕ್ರಮ ಅವಶ್ಯಕವೆಂದರು.

ವ್ಯವಸ್ಥಾಪಕರಾದ ಕೆ.ಎನ್.ಚೆಲುವಮೂರ್ತಿ, ಅಧ್ಯಾಪಕರಾದ ಡಾ.ಸಿ.ಆರ್.ಮನೋಜ್, ಕೆ.ರವಿಕುಮಾರ್, ರೇವಣ್ಣಸಿದ್ದೇಶ್ವರ, ಡಾ.ರಾಧಾಕೃಷ್ಣ,ಡಾ. ರಾಧಾ, ಅನಿತಲಕ್ಷ್ಮಿ, ಡಾ.ಮೋಹನಕುಮಾರ್, ಸತೀಶ ಕುಮಾರ್, ಐ.ಕೆ.ರಂಜನ ಉಪಸ್ಥಿತರಿದ್ದರು.

ವಾಣಿಜ್ಯಶಾಸ್ತ್ರ ಸಹಾಯಕ ಪ್ರಾಧ್ಯಾಪಕರಾದ ಡಾ.ಸಿ.ಜಿ.ನಾಗಮಣಿ ಕಾರ್ಯಕ್ರಮ ನಿರೂಪಿಸಿ, ಡಾ.ಎನ್.ಟಿ. ಶ್ರೀನಿವಾಸ ಸ್ವಾಗತಿಸಿ, ಈಶ್ವರಪ್ಪ ವಂದಿಸಿದರು.

# ಸೆ.12 'ಪ್ರಜಾಸೇವೆ ಆಂದೋಲನ'

ತುಮಕೂರು: ತಾಲ್ಲೂಕಿನ ಬೆಳ್ಳಾವಿ ಹೋಬಳಿಯಲ್ಲಿ ಸಾರ್ವಜನಿಕರ ಕುಂದು–ಕೊರತೆಗಳನ್ನು ಆಲಿಸಿ ಸ್ಥಳದಲ್ಲಿಯೇ ಪರಿಹಾರ ಒದಗಿಸುವ ಉದ್ದೇಶದಿಂದ ಸೆಪ್ಟೆಂಬರ್ 12ರಂದು ಶನಿವಾರ ಬೆಳಗ್ಗೆ 10 ಗಂಟೆಗೆ ಬೆಳ್ಳಾವಿ ಹೋಬಳಿ ಕೇಂದ್ರದ ಗ್ರಾಮ ಪಂಚಾಯತಿ ಆವರಣದಲ್ಲಿ ಶಾಸಕ ಬಿ. ಸುರೇಶ್ ಗೌಡ ಅವರ ಅಧ್ಯಕ್ಷತೆಯಲ್ಲಿ 'ಪ್ರಜಾಸೇವೆ ಆಂದೋಲನ' ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಹಶೀಲ್ದಾರ್ ರಾಜೇಶ್ವರಿ ತಿಳಿಸಿದ್ದಾರೆ.

# ನಿಡಗಲ್ಲು ದುರ್ಗವನ್ನು ಪ್ರವಾಸೋದ್ಯಮ ಕೇಂದ್ರವನ್ನಾಗಿಸಲು ಒತ್ತಾಯ

ಪಾವಗಡ: ಮಹರ್ಷಿ ವಾಲ್ಮೀಕಿ ಆಶ್ರಮ, ವಾಲ್ಮೀಕಿ ಜಾಗೃತಿ ವೇದಿಕೆ, ನಿಡಗಲ್ಲು ಗ್ರಾಮಸ್ಥರು ಹಾಗೂ ನಿಡಗಲ್ಲು ದುರ್ಗದ ಅಭಿಮಾನಿಗಳ ವತಿಯಿಂದ 10ನೇ ವರ್ಷದ ನಿಡಗಲ್ಲು ಉತ್ಸವ 2026 ಅನ್ನು ನಿಡಗಲ್ಲು ದುರ್ಗದ ರಾಮತೀರ್ಥದ ಬಳಿ ಅದ್ದೂರಿಯಾಗಿ ಆಚರಿಸಲಾಯಿತು.

ಡೋಲು ಬಾರಿಸುವ ಮೂಲಕ ವೇದಿಕೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷೆ ಶಾಂತಲಾ ರಾಜಣ್ಣ, ಸರ್ಕಾರವೇ ಪ್ರತಿವರ್ಷ ನಿಡಗಲ್ಲು ಉತ್ಸವವನ್ನು ಆಚರಿಸಬೇಕು. ಐತಿಹಾಸಿಕ ನಿಡಗಲ್ಲು ದುರ್ಗವನ್ನು ಪ್ರವಾಸೋದ್ಯಮ ಕೇಂದ್ರವನ್ನಾಗಿ ಅಭಿವೃದ್ಧಿಪಡಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಮಾಜಿ ಶಾಸಕ ಕೆ.ಎಂ. ತಿಮ್ಮರಾಯಪ್ಪ ಮಾತನಾಡಿ, ತಮ್ಮ ಶಾಸಕಾವಧಿಯಲ್ಲಿ ನಿಡಗಲ್ಲು ದುರ್ಗದ ಅಭಿವೃದ್ಧಿಗೆ ಹೆಚ್ಚಿನ ಅನುದಾನ ಒದಗಿಸಲಾಗಿತ್ತು. ಮುಂದಿನ ದಿನಗಳಲ್ಲಿ ವಾಲ್ಮೀಕಿ ಆಶ್ರಮದ ಅಭಿವೃದ್ಧಿಗೆ ಸಂಸದರ ನಿಧಿಯಿಂದಲೂ ಸಹಕಾರ ಕೊಡಿಸುವುದಾಗಿ ಭರವಸೆ ನೀಡಿದರು.

ತುಮಕೂರು ನಗರಸಭೆ ಮಾಜಿ ಮಹಾಪೌರ ಹಾಗೂ ವಾಲ್ಮೀಕಿ ಬ್ಯಾಂಕ್ ಅಧ್ಯಕ್ಷ ಬಿ.ಜಿ. ಕೃಷ್ಣಪ್ಪ ಮಾತನಾಡಿ, ವಾಲ್ಮೀಕಿ ಆಶ್ರಮದ ಭವನದ ಮುಂದುವರಿದ ಕಾಮಗಾರಿಗೆ ವೈಯಕ್ತಿಕವಾಗಿ ಹಾಗೂ ಬ್ಯಾಂಕ್ ವತಿಯಿಂದ ಅಗತ್ಯ ಸಹಕಾರ ನೀಡುವುದಾಗಿ ತಿಳಿಸಿದರು.ದಿವ್ಯಸಾನಿಧ್ಯ ವಹಿಸಿದ್ದ ವಾಲ್ಮೀಕಿ ಸಂಜಯಕುಮಾರಾನಂದ ಸ್ವಾಮೀಜಿ ಮಾತನಾಡಿ, ಕಳೆದ 10 ವರ್ಷಗಳಿಂದ ನಿಡಗಲ್ಲುಈ ಉತ್ಸವವನ್ನು



ನಿರಂತರವಾಗಿ ಆಚರಿಸಿಕೊಂಡು ಬರುತ್ತಿದ್ದರೂ ಸ್ಥಳೀಯ ಜನಪ್ರತಿನಿಧಿಗಳು ಸೂಕ್ತ ಗಮನ ಹರಿಸದಿರುವುದು ಬೇಸರದ ಸಂಗತಿ ಎಂದರು.

ಮುಂದಿನ ದಿನಗಳಲ್ಲಿ ಸರ್ಕಾರದ ವತಿಯಿಂದಲೇ ನಿಡಗಲ್ಲು ಉತ್ಸವ ಆಚರಿಸಲು ಹಾಗೂ ವಾಲ್ಮೀಕಿ ಆಶ್ರಮದ ಅಭಿವೃದ್ಧಿಗೆ ಶಾಸಕರು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಉತ್ಸವಕ್ಕೆ ಶಾಸಕರು ಗೈರಾಗಿರುವುದಕ್ಕೂ ಸ್ವಾಮೀಜಿ ಬೇಸರ ವ್ಯಕ್ತಪಡಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಾಲ್ಮೀಕಿ ಜಾಗೃತಿ ವೇದಿಕೆ ಅಧ್ಯಕ್ಷ ಶ್ರೀ ಲೋಕೇಶ್ ಪಾಳೇಗಾರ್ ವಹಿಸಿದ್ದರು.

**ಪಾಳೇಗಾರರ ಉಪಸ್ಥಿತಿಗೆ ವಿಶೇಷ ಮೆರಗು:**

ವಿವಿಧ ಸಂಸ್ಥಾನಗಳ ಪಾಳೇಗಾರ ವಂಶಸ್ಥರು ಉತ್ಸವದಲ್ಲಿ ಭಾಗವಹಿಸಿದ್ದು ಕಾರ್ಯಕ್ರಮಕ್ಕೆ ವಿಶೇಷ ಮೆರಗು ತಂದಿತು. ಚಿತ್ರದುರ್ಗದ ದೊಡ್ಡ ಮದಕರಿ ನಾಯಕ ವಂಶಸ್ಥರಾದ ರಾಜ ಪ್ರಸನ್ನ ನಾಯಕ, ರಾಜ ಯಲ್ಲಪ್ಪ ನಾಯಕ ಸಂಸ್ಥಾನದ ದೊರೆ ಪಾಳೇಗಾರ ರಾಜ ಜಯಚಂದ್ರ ರಾಜು, ನಾಯಕನಹಟ್ಟಿ ಸಂಸ್ಥಾನದ ಪಾಳೇಗಾರ ರಾಜಾ ರುದ್ರಮುನಿ ಪಾಳೇಗಾರ್, ಕಣ್‌ಕುಪ್ಪೆ ಸಂಸ್ಥಾನದ ಪಾಳೇಗಾರ ರಾಜ ತಿಪ್ಪೇಶ್ ಪಾಳೇಗಾರ್ ಹಾಗೂ ಹೊಸದುರ್ಗ ಸಂಸ್ಥಾನದ ಪಾಳೇಗಾರ ರಾಜ ಶ್ರೀಧರ್ ನಾಯಕ ಉಪಸ್ಥಿತರಿದ್ದರು. ನಿಡಗಲ್ಲು ಗ್ರಾಮದ ಶ್ರೀ ಮಹರ್ಷಿ ವಾಲ್ಮೀಕಿ ಆಶ್ರಮದಿಂದ ವಿವಿಧ ಕಲಾತಂಡಗಳೊಂದಿಗೆ ರಾಮತೀರ್ಥದವರೆಗೆ ಮೆರವಣಿಗೆ ನಡೆಯಿತು. ಕಾರ್ಯಕ್ರಮದಲ್ಲಿ. ಮಾಜಿ ಜಿಲ್ಲಾ ಪಂಚಾಯಿತಿ ಸದಸ್ಯ ತಿಮ್ಮಾರೆಡ್ಡಿ, ಡಿಸಿಸಿ ಬ್ಯಾಂಕ್ ನಿರ್ದೇಶಕ ಲಕ್ಷ್ಮೀನಾರಾಯಣ್, ವಾಲ್ಮೀಕಿ ವಿದ್ಯಾವರ್ಧಕ ಸಂಘದ ಅಧ್ಯಕ್ಷ ಪುರುಷೋತ್ತಮ್ ನಾಯಕ, ಜಿಲ್ಲಾ ನಾಯಕ ಸಂಘದ ಪದಾಧಿಕಾರಿಗಳಾದ ಜಯರಾಮ್, ಎನ್. ಅನಿಲ್ ಕುಮಾರ್, ಆರ್‌ಟಿಒ ತಿಪ್ಪೇಸ್ವಾಮಿ, ನಾಗರಾಜ್, ಕೆ.ಆರ್ ನಾಗೇಶ್ ಕೊತ್ತೂರು, ಸೊಗಡು ವೆಂಕಟೇಶ್, ಎನ್.ಎ. ಈರಣ್ಣ, ಪಿಡಿಒ ಚಿಕ್ಕಣ್ಣ, ಡಿಎಸ್‌ಎಸ್‌ನ ಸಿ.ಕೆ. ತಿಪ್ಪೇಸ್ವಾಮಿ, ರಾಜ್ಯ ಸಂಪನ್ಮೂಲ ವ್ಯಕ್ತಿ ನವೀನ್ ಕಿಲಾರ್ಲಹಳ್ಳಿ, ವೆಂಕಟೇಶ್ ಉಪಸ್ಥಿತರಿದ್ದರು.

# ತ.ನಾಡಿಗೆ ನೀರು ಹರಿಸುವ ಆದೇಶದ ವಿರುದ್ಧ ಕೋರ್ಟ್‌ಗೆ ಅರ್ಜಿ

ಬೆಂಗಳೂರು: ತಮಿಳುನಾಡಿಗೆ ನಿತ್ಯ 6 ಸಾವಿರ ಕ್ಯೂಸೆಕ್ ನೀರು ಹರಿಸುವಂತೆ ಕಾವೇರಿ ನೀರು ನಿಯಂತ್ರಣ ಸಮಿತಿ (ಅಘಖಅ) ಹಾಗೂ ಪ್ರಾಧಿಕಾರ (ಅಘಒಂ) ನೀಡಿರುವ ಆದೇಶವನ್ನು ಪ್ರಶ್ನಿಸಿ ರಾಜ್ಯ ಸರ್ಕಾರವು ಸುಪ್ರೀಂ ಕೋರ್ಟ್ ಮೆಟ್ಟಿಲೇರಲು ಸಜ್ಜಾಗಿದೆ ಎಂದು ಜಲ ಸಂಪನ್ಮೂಲ ಸಚಿವ ಎನ್. ಚಲುವರಾಯಸ್ವಾಮಿ ಸ್ಪಷ್ಟಪಡಿಸಿದ್ದಾರೆ.

ವಿಧಾನಸೌಧದಲ್ಲಿ ಇಂದು ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಈ ವಿಚಾರವಾಗಿ ಮುಖ್ಯಮಂತ್ರಿಗಳ ಜೊತೆ ಸುದೀರ್ಘ ಚರ್ಚೆ ನಡೆಸಲಾಗಿದೆ. ಕಾನೂನು ತಜ್ಞರ ತಂಡದೊಂದಿಗೆ ಸಮಾಲೋಚಿಸಿ ನಾಳೆಯೇ ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಲಾಗಿದೆ. ಇದರ ಜೊತೆಗೆ ಸಿಡಬ್ಲ್ಯುಆರ್‌ಸಿ ಮುಂದೆಯೂ ಮರುಪರಿಶೀಲನಾ ಅರ್ಜಿ ಸಲ್ಲಿಸುವಂತೆ ಸೂಚಿಸಲಾಗಿದೆ ಎಂದು ತಿಳಿಸಿದರು.

ಸಿಡಬ್ಲ್ಯುಆರ್‌ಸಿ ಆದೇಶವನ್ನು ಪ್ರಾಧಿಕಾರ ಕೂಡ ಎತ್ತಿ ಹಿಡಿದಿದೆ. ಆದರೆ, ಪ್ರಸ್ತುತ ನಮ್ಮ ಜಲಾಶಯಗಳಲ್ಲಿನ ನೀರಿನ ಸಂಗ್ರಹ ಕೆಳಮಟ್ಟದಲ್ಲಿದೆ. ಬಿಡಲು ನಮ್ಮಲ್ಲೇ ನೀರಿಲ್ಲ. ಸದ್ಯ ಕೇವಲ ಕುಡಿಯುವ ನೀರಿಗಷ್ಟೇ ಆದ್ಯತೆ ನೀಡಬೇಕಾಗಿದ್ದು, ಇದರ ನಡುವೆ ಬತ್ತಿ ಹೋಗಿರುವ ಕೆರೆ–ಕಟ್ಟೆಗಳನ್ನು ಸಹ ತುಂಬಿಸಬೇಕಾದ ಅನಿವಾರ್ಯತೆ ಇದೆ. ಗೌರಿ–ಗಣೇಶ ಹಬ್ಬದ ಒಂದು ವಾರದೊಳಗೆ ಉತ್ತಮ ಮಳೆಯಾದರೆ ಮಾತ್ರ ಪರಿಸ್ಥಿತಿ ತುಸು ಸುಧಾರಿಸಿಕೊಳ್ಳಬಹುದು ಎಂದು ಅವರು ಹೇಳಿದರು. ನಾವು ಯಾವುದೇ ಕಾರಣಕ್ಕೂ ಸಿಡಬ್ಲ್ಯುಆರ್‌ಸಿ



ಆದೇಶವನ್ನು ಸಮರ್ಥಿಸಿಕೊಳ್ಳುವುದಿಲ್ಲ. ಈ ಹಿಂದೆ 100 ಟಿಎಂಸಿ ನೀರು ಬಿಡಲಾಗಿತ್ತು. ಆದರೆ, ಈ ಬಾರಿ 30 ಟಿಎಂಸಿ ನೀಡಿದ್ದೇವೆ. ಆದರೂ, ತಮಿಳುನಾಡು ಸರ್ಕಾರ ನಿರಂತರವಾಗಿ ಒತ್ತಡ ಹೇರುತ್ತಲೇ ಇದೆ. ಕಾವೇರಿ ವಿಚಾರದಲ್ಲಿ ರಾಜ್ಯದ ಹಿತ ಕಾಪಾಡಲು, ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಸಲಹೆ ನೀಡಿರುವಂತೆ ಸುಪ್ರೀಂ ಕೋರ್ಟ್‌ನಲ್ಲಿ ವಾದ ಮಂಡಿಸಲು ವಿಶೇಷ ವಕೀಲರನ್ನು (ಖಿಳಿಜಿಭಿಚಿಟ ಂಜತಿಠಿಛಿಚಿಣಜ) ನೇಮಿಸುವ ಕುರಿತು ಸರ್ಕಾರ ಗಂಭೀರವಾಗಿ ಚಿಂತನೆ ನಡೆಸಲಿದೆ. ಜತೆಗೆ ಅವರೊಟ್ಟಿಗೂ ಸಹ ಮಾತನಾಡಲಾಗುವುದು ಎಂದು ವಿವರಿಸಿದರು.

**ಇ.ಡಿ ದಾಳಿ ರಾಜಕೀಯ ಪ್ರೇರಿತ:** ಇದೇ ವೇಳೆ, ಸಚಿವ ಸತೀಶ್ ಜಾರಕಿಹೊಳಿ ಹಾಗೂ ಅವರ ಆಪ್ತರ ಮನೆಗಳ ಮೇಲೆ ನಡೆದಿರುವ ಜಾರಿ ನಿರ್ದೇಶನಾಲಯದ (ಇ.ಡಿ) ದಾಳಿಯ ಕುರಿತು ಪ್ರತಿಕ್ರಿಯಿಸಿದ ಸಚಿವರು, ಬಿಜೆಪಿಯವರ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು. ಕಾನೂನಿನ ಪ್ರಕಾರ ಅವರು ಏನು ಬೇಕಿದ್ದರೂ ಮಾಡಿಕೊಳ್ಳಲಿ. ಆದರೆ, ಬಿಜೆಪಿಯವರಿಗೆ ವಿಪಕ್ಷ ನಾಯಕರನ್ನು ಗುರಿಯಾಗಿಸಿಕೊಂಡು ದಾಳಿ ಮಾಡಿಸುವುದೇ ಕಾಯಕವಾಗಿದೆ. ಮಧ್ಯಪ್ರದೇಶ, ಒಡಿಶಾ ಸೇರಿದಂತೆ ಬಿಜೆಪಿ ಮತ್ತು ಅದರ ಮಿತ್ರಪಕ್ಷಗಳು ಅಧಿಕಾರದಲ್ಲಿರುವ ಇತರ ರಾಜ್ಯಗಳ ಸಚಿವರ ಮೇಲೆ ಇಂತಹ ಇ.ಡಿ ದಾಳಿಗಳು ಏಕೆ ನಡೆಯುವುದಿಲ್ಲ ಎಂದು ಕೇಂದ್ರ ಸರ್ಕಾರದ ತಾರತಮ್ಯ ನೀತಿಯನ್ನು ಅವರು ಕಟುವಾಗಿ ಪ್ರಶ್ನಿಸಿದರು.

# ಪತ್ನಿಯನ್ನು ಬಿಯರ್ ಬಾಟಲಿಯಿಂದ ಇರಿದು ಕೊಂದು ಪತಿ ಆತ್ಮಹತ್ಯೆ

ಬೆಂಗಳೂರು: ಕ್ಷುಲ್ಲಕ ವಿಚಾರಕ್ಕೆ ದಂಪತಿ ನಡುವೆ ನಡೆದ ಗಲಾಟೆ ಹತ್ಯೆ ಹಾಗೂ ಆತ್ಮಹತ್ಯೆಯಲ್ಲಿ ಅಂತ್ಯವಾಗಿರುವ ಘೋರ ಘಟನೆ ಬೆಂಗಳೂರಿನಲ್ಲಿ ನಡೆದಿದೆ. ತಡರಾತ್ರಿ ಹೆಚ್‌ಎಎಲ್ ಪೊಲೀಸ್ ಠಾಣೆ ವ್ಯಾಪ್ತಿಯ ವಿಭೂತಿಪುರದಲ್ಲಿ ಘಟನೆ ನಡೆದಿದ್ದು, ಶೃತಿ (30) ಹತ್ಯೆಯಾದ ಗೃಹಿಣಿ. ಬಿಯರ್ ಬಾಟಲಿಯಿಂದ ಇರಿದು ಪತ್ನಿಯನ್ನು ಕೊಲೆ ಮಾಡಿದ ಬಳಿಕ ಪತಿ ರಾಘವೇಂದ್ರ (36) ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.



ಮೂಲತಃ ದಾವಣಗೆರೆಯವರಾದ ಶೃತಿ ಹಾಗೂ ರಾಘವೇಂದ್ರಗೆ 17 ವರ್ಷಗಳ ಹಿಂದೆ ಮದುವೆಯಾಗಿತ್ತು. ದಂಪತಿಗೆ ಇಬ್ಬರು ಮಕ್ಕಳಿದ್ದು, ಮಕ್ಕಳನ್ನು ಶೃತಿಯ ಪೋಷಕರ ಮನೆಯಲ್ಲಿ ಬಿಟ್ಟು ಇಬ್ಬರೂ ಬೆಂಗಳೂರಿನ ವಿಭೂತಿಪುರದಲ್ಲಿ ವಾಸವಿದ್ದರು. ದಂಪತಿ ವಾಸವಿದ್ದ ಕಟ್ಟಡದ ಮೇಲ್ಮಹಡಿಯಲ್ಲಿಯೇ ರಾಘವೇಂದ್ರನ ಪೋಷಕರು ವಾಸವಿದ್ದರು.

ರಾಘವೇಂದ್ರ ಆಟೋ ಚಾಲಕನಾಗಿ ಕೆಲಸ ಮಾಡುತ್ತಿದ್ದರೆ, ಶೃತಿ ಅಪಾರ್ಟ್‌ಮೆಂಟ್‌ವೊಂದರಲ್ಲಿ ಮನೆಕೆಲಸ ಮಾಡಿಕೊಂಡಿದ್ದರು. ಪತ್ನಿ ಅಡುಗೆ ಮಾಡಲ್ಲ, ಅತಿಯಾಗಿ ಮೊಬೈಲ್ ಫೋನ್ ಬಳಸುತ್ತಿರುತ್ತಾಳೆ ಎಂದು ಆಗಾಗ್ಗೆ ರಾಘವೇಂದ್ರ ಗಲಾಟೆ ಮಾಡುತ್ತಿದ್ದ. ಇತ್ತ ಪತಿ ಸಹ ಮದ್ಯಪಾನ ಮಾಡುತ್ತಾನೆ ಎಂದು ಶೃತಿ ಆರೋಪಿಸಿದ್ದಳು. ಇಬ್ಬರ ನಡುವಿನ ಈ ಗಲಾಟೆ ಇತ್ತೀಚಿಗೆ ಪೊಲೀಸ್ ಠಾಣೆ ಮೆಟ್ಟಿಲೇರಿದಾಗ ಇಬ್ಬರಿಗೂ ಪೊಲೀಸರು ಬುದ್ಧಿವಾದ ಹೇಳಿ ಕಳಿಸಿದ್ದರು.

ಮಂಗಳವಾರ ರಾತ್ರಿ ದಂಪತಿ ನಡುವೆ ಮಾತಿಗೆ ಮಾತು ಬೆಳೆದು ಜಗಳ ತೀವ್ರ ಸ್ವರೂಪ ಪಡೆದುಕೊಂಡಿದೆ. ಜಗಳ ವಿಕೋಪಕ್ಕೆ ತಿರುಗಿದಾಗ ಆಕ್ರೋಶಗೊಂಡ ರಾಘವೇಂದ್ರ, ಖಾಲಿ ಬಿಯರ್ ಬಾಟಲಿಯಿಂದ ಪತ್ನಿ ಶೃತಿಗೆ ಇರಿದಿದ್ದಾನೆ. ತೀವ್ರ ರಕ್ತಸ್ರಾವದಿಂದ ಶೃತಿ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಪತ್ನಿಯ ಸಾವಿನ ನಂತರ ತಾನೂ ಸಹ ನೇಣು ಬಿಗಿದುಕೊಂಡು ರಾಘವೇಂದ್ರ ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎಂದು ಪೊಲೀಸರು ಹೇಳಿದ್ದಾರೆ.

ವಿಷಯ ತಿಳಿಯುತ್ತಿದ್ದಂತೆ ಹೆಚ್‌ಎಎಲ್ ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಘಟನೆಗೆ ಸಂಬಂಧಿಸಿದಂತೆ ಪ್ರಕರಣ ದಾಖಲಿಸಿಕೊಳ್ಳಲಾಗಿದ್ದು ಮುಂದಿನ ಕಾನೂನು ಕ್ರಮ ಕೈಗೊಂಡಿರುವುದಾಗಿ ವೈಟ್‌ಫೀಲ್ಡ್ ವಿಭಾಗದ ಡಿಸಿಪಿ ಸೈದುಲು ಅಡಾವತ್ ತಿಳಿಸಿದ್ದಾರೆ.

# ಹಾವೇರಿಯಲ್ಲಿ ಮಳೆ ಅಭಾವ: ವರದಾ ನದಿ ಕ್ರಸ್ಟ್‌ಗೇಟ್ ಹಾಕಲು ರೈತರ ಆಗ್ರಹ



ಹಾವೇರಿ: ಜಿಲ್ಲೆಯಲ್ಲಿ ವರದಾ, ತುಂಗಭದ್ರಾ, ಕುಮದ್ವತಿ ಮತ್ತು ಧರ್ಮಾ ನದಿಗಳು ಹರಿಯುತ್ತವೆ. ವರದಾ ಮತ್ತು ತುಂಗಭದ್ರಾ ನದಿಗಳು ನೀರಾವರಿ ಸೇರಿದಂತೆ ಜನ ಜಾನುವಾರುಗಳ ದಾಹ ತೀರಿಸುತ್ತವೆ. ಅದರಲ್ಲೂ ವರದಾ ನದಿಯನ್ನು ಅವಲಂಬಿಸಿ ಹಲವು ಏತ ನೀರಾವರಿ ಯೋಜನೆಗಳನ್ನು ರೂಪಿಸಲಾಗಿದೆ. ಅಲ್ಲದೆ, ಮಳೆಗಾಲ ಮುಗಿಯುತ್ತಿದ್ದಂತೆ ನದಿಗಳಲ್ಲಿ ನೀರು ನಿಲ್ಲಿಸಲು ಹಾವೇರಿ ಜಿಲ್ಲೆಯ 14 ಕಡೆ ಕ್ರಸ್ಟ್?ಗೇಟ್ ಅಳವಡಿಸಲಾಗಿದೆ.

ಈ ವರ್ಷ ಜಿಲ್ಲೆಯಲ್ಲಿ ವಾಡಿಕೆಗಿಂತ ಕಡಿಮೆ ಪ್ರಮಾಣದ ಮಳೆಯಾಗಿದೆ. ವರದಾ ಮತ್ತು ತುಂಗಭದ್ರಾ ನದಿಗಳ ಜಲಾನಯನ ಪ್ರದೇಶದಲ್ಲಿ ವ್ಯಾಪಕ ಮಳೆಯಾಗಿರುವ ಕಾರಣ ಮೈದುಂಬಿ ಹರಿದಿದ್ದವು. ಆದರೆ ಈಗ ಜಲಾನಯನ ಪ್ರದೇಶದಲ್ಲಿ ಮಳೆಯಿಲ್ಲದ ಕಾರಣ ಈ ನದಿಗಳ ಹರಿವು ಇಳಿಕೆಯಾಗಿದೆ. ಹಿಂಗಾರು ಮಳೆಯೂ ಸಹ ಕೈಕೊಟ್ಟಿದೆ. ಸದ್ಯ ವರದಾ ನದಿಯಲ್ಲಿ ಅಲ್ಪಸ್ವಲ್ಪ ನೀರು ಹರಿದು ಮುಂದೆ ತುಂಗಭದ್ರಾ ನದಿಗೆ ಸೇರುತ್ತಿದೆ.

**ಕ್ರಸ್ಟ್‌ಗೇಟ್ ಹಾಕುವಂತೆ ರೈತರ ಮನವಿ:** ಮಲೆನಾಡಿನಿಂದ ಹಾವೇರಿ ಪ್ರವೇಶಿಸಿ ತುಂಗಭದ್ರಾ ನದಿಗೆ ಸೇರುವ ವರದಾ ನದಿಗೆ ಹಾವೇರಿ ಜಿಲ್ಲೆ ಹಾನಗಲ್ ಮತ್ತು ಹಾವೇರಿ ತಾಲೂಕುಗಳಲ್ಲಿ ಸುಮಾರು 14 ಕ್ರಸ್ಟ್‌ಗೇಟ್ ಕಂ ಬ್ಯಾರೇಜ್‌ಗಳಿವೆ. ಈ ಕ್ರಸ್ಟ್‌ಗೇಟ್‌ಗಳನ್ನು ಬಂದ್ ಮಾಡಿದರೆ ನೀರು ನಿಲ್ಲುತ್ತದೆ. ಅಲ್ಲದೆ, ಏತ ನೀರಾವರಿ ಯೋಜನೆಗಳಿಗೆ ನೀರು ಹರಿಸಬಹುದು.

ಪ್ರತಿವರ್ಷ ಅಕ್ಟೋಬರ್, ನವೆಂಬರ್ ತಿಂಗಳಲ್ಲಿ ಗೇಟ್ ಹಾಕಲಾಗುತ್ತದೆ. ಆದರೆ ಈ ವರ್ಷ ಸೆಪ್ಟಂಬರ್ ಆರಂಭದಲ್ಲೇ ನೀರಿನ ಹರಿವು ಕಡಿಮೆಯಾಗಿದ್ದು, ಕ್ರಸ್ಟ್?ಗೇಟ್ ಹಾಕುವಂತೆ ರೈತರು ಒತ್ತಾಯಿಸಿದ್ದಾರೆ. ವರದಾ ನದಿಯಲ್ಲಿ ಸ್ವಲ್ಪ ಪ್ರಮಾಣದ ನೀರು ಹರಿಯುತ್ತಿದೆ. ಹೀಗೆ ಬಿಟ್ಟರೆ ಬೇಸಿಗೆಯಲ್ಲಿ ಜನ ಜಾನುವಾರುಗಳಿಗೆ ನೀರಿನ ಕೊರತೆ ಎದುರಾಗಲಿದೆ. ಈಗ ಇರುವ ನೀರನ್ನೇ ಕ್ರಸ್ಟ್‌ಗೇಟ್ ಹಾಕಿದರೆ ರೈತರಿಗೆ, ಜನ ಜಾನುವಾರುಗಳಿಗೆ ನೀರು ಸಿಗಲಿದೆ. ಅಲ್ಲದೆ ಅಂತರ್ಜಲ ಮಟ್ಟ ಸಹ ಸುಧಾರಣೆಯಾಗಲಿದೆ. ಪ್ರತಿ ವರ್ಷದಂತೆ ಅಕ್ಟೋಬರ್ ಗೇಟ್ ಹಾಕುತ್ತೇವೆ ಎಂದರೆ ನಮಗೆ ನೀರಿನ ಸಮಸ್ಯೆಯಾಗುವುದು ಗ್ಯಾರಂಟಿ ಎನ್ನುತ್ತಿದ್ದಾರೆ ರೈತರು.

ರೈತ ರಾಜು ತರ್ಲಗಟ್ಟ ಮಾತನಾಡಿ, "ರೈತರ ಪ್ರಮುಖ ಬೇಡಿಕೆಯೆಂದರೆ ವರದಾ ನದಿಗೆ ಕ್ರಸ್ಟ್ ಗೇಟ್ ಹಾಕುವುದು. ಇನ್ನೂ ಕೆಲವು ತಿಂಗಳು ಕಳೆದರೆ ಸಂಕ್ರಾಂತಿ ಹಬ್ಬ ಬರುತ್ತದೆ. ಆದರೆ ಈ ಹಬ್ಬದಲ್ಲಿ ಗುಬ್ಬಿಗಳು ಸಹ ಮೈತೊಳೆದುಕೊಳಲಾರದಷ್ಟು ನೀರು ಇರುವ ಆತಂಕವಾಗುತ್ತಿದೆ. ಈ ರೀತಿಯಾದರೆ ರೈತರು ವರದಾ ನದಿಗೆ ಬಂದು ಸಂಕ್ರಾಂತಿ ಆಚರಿಸದೇ ಬರಿಗೈಯಲ್ಲಿ ವಾಪಸ್ ಹೋಗುವ ಪರಿಸ್ಥಿತಿ ಬರಬಹುದು. ಈ ಕ್ರಸ್ಟ್‌ಗೇಟ್‌ಗಳನ್ನು ಯಾವಾಗ ಅಳವಡಿಸುತ್ತಾರೆ. ಗೇಟ್ ಅಳವಡಿಸಿದರೂ ಸಾಕಷ್ಟು ಸೋರಿಕೆ ಇದೆ. ಈ ಕುರಿತಂತೆ ಕೇಳಮಟ್ಟದ ಅಧಿಕಾರಿಗಳಿಂದ ಹಿಡಿದು ಜಿಲ್ಲಾಧಿಕಾರಿ ಜೊತೆ ಮಾತನಾಡಿದರೆ ನಮಗೆ ಆಶ್ವಾಸನೆ ನೀಡುತ್ತಾರೆಯೇ ವಿನಃ ಅನುಷ್ಠಾನವಾಗುತ್ತಿಲ್ಲ" ಎಂದರು.

"ವರದಾ ನದಿಯಲ್ಲಿ ಕ್ರಸ್ಟ್‌ಗೇಟ್ ಹಾಕಬೇಕು. ಗ್ರಾಮಗಳ ಕೆರೆಕಟ್ಟೆಗಳಲ್ಲಿ ನೀರಿಲ್ಲ, ಅವುಗಳನ್ನು ತುಂಬಿಸುವ ಕೆಲಸವಾಗಬೇಕು. ನದಿಯಲ್ಲಿ ನೀರು ಎಷ್ಟು ಪೋಲಾಗಿ ಹೋಗುತ್ತಿದೆ. ಅದನ್ನು ನೋಡಿದರೆ ನಮಗೆ ಸಂಕಟವಾಗುತ್ತಿದೆ. ಸಂಕ್ರಾಂತಿ ದಿನ ಬಂದು ಪೂಜೆ ಮಾಡಲು ಮುಂದಾದರೆ ನೀರು ಇಲ್ಲದಂತಾಗಿ ದೇವರಿಗೆ ಬೈಯ್ಯುವ ಪರಿಸ್ಥಿತಿ ಬರಲಿದೆ. ಪ್ರತಿ ವರ್ಷ ನದಿಯಲ್ಲಿ ನೀರಿನ ಪ್ರಮಾಣ ಕಡಿಮೆಯಾಗುತ್ತಿದ್ದಂತೆ ಕ್ರಸ್ಟ್‌ಗೇಟ್ ಹಾಕುತ್ತಾರೆ. ಆದರೆ ಈ ವರ್ಷ ಮಳೆ ಕಡಿಮೆಯಾಗಿದೆ, ನೀರು ಖಾಲಿಯಾಗುವ ಮುನ್ನ ಕ್ರಸ್ಟ್ ಗೇಟ್ ಹಾಕಬೇಕು. ಇದಲ್ಲದೆ ಕೆಲ ಕೆರೆಕಟ್ಟೆಗಳನ್ನು ತುಂಬಿಸಿದರೆ ನಮಗೆ ಅನುಕೂಲವಾಗಲಿದೆ. ನಮಗೆ ರಾಜಕಾರಣಿಗಳು, ಅಧಿಕಾರಿಗಳು ಅನ್ಯಾಯ ಮಾಡುತ್ತಿದ್ದರು. ಈಗ ವರುಣದೇವ ಸಹ ಅನ್ಯಾಯ ಮಾಡುತ್ತಿದ್ದಾನೆ. ರೈತರ ಕೈಹಿಡಿಯುತ್ತಿದ್ದ ವರುಣ ಈ ವರ್ಷ ಕೈಬಿಟ್ಟಿದ್ದಾನೆ" ಎಂದು ರಾಜು ತರ್ಲಗಟ್ಟ ಅಳಲು ತೋಡಿಕೊಂಡರು.

ಇದೇ ವೇಳೆ ಮಾತನಾಡಿದ ರೈತ ಅಬ್ದುಲ್ ಖಾದರ್, "ಕೆರೆಕಟ್ಟೆಗಳು ತುಂಬಿಲ್ಲ, ಜನ ಜಾನುವಾರುಗಳಿಗೆ ಕುಡಿಯಲು ನೀರಿಲ್ಲ. ಸವಣೂರು ತಾಲೂಕಿನ ಶಿರಬಡಗಿ ಗ್ರಾಮ ಸೇರಿದಂತೆ ವಿವಿಧ ಗ್ರಾಮಗಳಲ್ಲಿ ಕೆರೆಗಳಲ್ಲಿ ನೀರಿನ ಕೊರತೆಯಾಗಿದೆ. ವರದಾ ನದಿ ನೀರನ್ನು ಹಿಡಿದಿಡುವ ಪ್ರಯತ್ನ ಮಾಡಬೇಕು. ಆದರೆ ಇಲ್ಲಿಯವರೆಗೆ ಗೇಟ್ ಹಾಕಿಲ್ಲ. ಅಧಿಕಾರಿಗಳನ್ನು ಕೇಳಿದರೆ ಜನವರಿಯಲ್ಲಿ ಹಾಕುತ್ತೇವೆ ಎನ್ನುತ್ತಿದ್ದಾರೆ. ಅಧಿಕಾರಿಗಳು ಗೇಟ್ ಹಾಕುವಷ್ಟರಲ್ಲಿ ನದಿಯಲ್ಲಿನ ನೀರು ಖಾಲಿಯಾಗುತ್ತದೆ. ಆದಷ್ಟು ಬೇಗ ಕ್ರಸ್ಟ್‌ಗೇಟ್ ಹಾಕಬೇಕು" ಎಂದು ಒತ್ತಾಯಿಸಿದ್ದಾರೆ.

ಸಣ್ಣ ನೀರಾವರಿ ಹಾನಗಲ್ ವಿಭಾಗದ ಜೆಇ ಮಂಜು ನಾಥ್ ಪ್ರತಿಕ್ರಿಯಿಸಿ, "ಹಾನಗಲ್ ತಾಲೂಕಿನಲ್ಲಿ ವರದಾ ನದಿಗೆ 7 ಕ್ರಸ್ಟ್‌ಗೇಟ್ ಕಂ ಬ್ಯಾರೇಜ್?ಗಳಿವೆ. ಪ್ರತಿ ವರ್ಷ ಅಕ್ಟೋಬರ್, ಡಿಸೆಂಬರ್ ತಿಂಗಳಲ್ಲಿ ಗೇಟ್ ಹಾಕುತ್ತೇವೆ. ಆದರೆ ಈ ವರ್ಷ ಸಮರ್ಪಕ ಮಳೆಯಾಗಿಲ್ಲ. ನದಿಯ ನೀರಿನ ಹರಿವು ಕಡಿಮೆಯಾದರೆ ನಾವು ಗೇಟ್ ಹಾಕುತ್ತೇವೆ. ಪ್ರಸ್ತುತ ವರದಾ ನದಿಯಲ್ಲಿ ನೀರಿನ ಹರಿಯುವ ವೇಗ ಅಧಿಕವಾಗಿದೆ. ಈ ಹಿನ್ನೆಲೆಯಲ್ಲಿ ಗೇಟ್ ಹಾಕಲಾಗಿಲ್ಲ. ಈಗಾಗಲೇ ಗೇಟ್ ಹಾಕಲು ಹೋಗಿ ವಾಪಸ್ ಬಂದಿದ್ದೇವೆ. ರೈತರು ಒತ್ತಾಯ ಮಾಡುವುದರಲ್ಲಿ ತಪ್ಪಿಲ್ಲ. ಹಾನಗಲ್ ತಾಲೂಕಿನಲ್ಲಿ 7, ಸವಣೂರು ತಾಲೂಕಿನಲ್ಲಿ 2 ಕ್ರಸ್ಟ್‌ಗೇಟ್‌ಗಳಿವೆ. ನೀರಿನ ರಭಸ ಕಡಿಮೆಯಾಗುತ್ತಿದಂತೆ ಗೇಟ್ ಹಾಕುತ್ತೇವೆ" ಎಂದು ತಿಳಿಸಿದರು.

ರಾಣೆಬೆನ್ನೂರು ಸಣ್ಣ ನೀರಾವರಿ ಉಪ ವಿಭಾಗದ ಎಇ ರೇವಣೆಪ್ಪ ಮಾಹಿತಿ ನೀಡಿ, "ನಮ್ಮಲ್ಲಿ 7 ಕ್ರಸ್ಟ್‌ಗೇಟ್ ಕಂ ಬ್ಯಾರೇಜ್‌ಗಳಿವೆ. ಗೇಟ್ ಹಾಕಲು ಸಕಲ ಸಿದ್ದತೆ ಮಾಡಿಕೊಂಡಿದ್ದೇವೆ. ರಿಪೇರಿ ಇರುವ ಗೇಟ್ ಸರಿ ಮಾಡಲಾಗಿದೆ. ಅವುಗಳಿಗೆ ಬೇಕಾಗುವ ರಬ್ಬರ್ ಸೇರಿದಂತೆ ಎಲ್ಲ ಸಿದ್ದತೆ ಮಾಡಿಕೊಂಡಿದ್ದೇವೆ. ಈಗಾಗಲೇ ಮರಳಿಹಳ್ಳಿ ಮತ್ತು ಕರ್ಜಗಿಯಲ್ಲಿ ಎರಡು ಹಂತದಲ್ಲಿ ಗೇಟ್ ಹಾಕಿದ್ದೇವೆ. ಆದರೆ ನೀರಿನ ರಭಸ ಅಧಿಕವಿರುವ ಕಾರಣ ಮೇಲಿನ ಗೇಟ್ ಹಾಕಲಾಗುತ್ತಿಲ್ಲ. ಮಧ್ಯದಲ್ಲಿ ಸ್ವಲ್ಪ ಮಳೆ ಬಂದ ಕಾರಣ ಗೇಟ್ ಹಾಕುವುದು ವಿಳಂಬವಾಗಿದೆ. ಆದಷ್ಟು ಬೇಗ ಎಲ್ಲ ಗೇಟ್ ಹಾಕುತ್ತೇವೆ" ಎಂದು ಹೇಳಿದರು.

# ಮೈಸೂರು ಕಂಬಳಕ್ಕೆ ಅಧಿಕೃತ ಆಹ್ವಾನ ಬಂದ ಬಳಿಕವಷ್ಟೇ ಅಂತಿಮ ನಿರ್ಧಾರ



ಮಂಗಳೂರು(ದಕ್ಷಿಣ ಕನ್ನಡ): ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಕಂಬಳ ಆಯೋಜಿಸುವ ಸಂಬಂಧ ಇದುವರೆಗೆ ಜಿಲ್ಲಾ ಕಂಬಳ ಸಮಿತಿಗಾಗಲಿ ಅಥವಾ ರಾಜ್ಯ ಕಂಬಳ ಅಸೋಸಿಯೇಷನ್‌ಗಾಗಲಿ ಯಾವುದೇ ಅಧಿಕೃತ ಲಿಖಿತ ಆಹ್ವಾನ ಇಲ್ಲವೇ ಪತ್ರ ಬಂದಿಲ್ಲ. ಅಧಿಕೃತ ಪ್ರಸ್ತಾವನೆ ಬಂದ ನಂತರವೇ ವಿಶೇಷ ಸಭೆ ಕರೆದು, ಕೋಣಗಳನ್ನು ಕರೆದೊಯ್ಯುವ ಹಾಗೂ ಸಹಕಾರ ನೀಡುವ ಬಗ್ಗೆ ಅಂತಿಮ ತೀರ್ಮಾನ ಕೈಗೊಳ್ಳಲು ನಿರ್ಧರಿಸಲಾಗಿದೆ ಎಂದು ರಾಜ್ಯ ಕಂಬಳ ಅಸೋಸಿಯೇಷನ್ ಅಧ್ಯಕ್ಷ ಡಾ.ದೇವಿಪ್ರಸಾದ್ ಶೆಟ್ಟಿ ಬೆಳಪು ತಿಳಿಸಿದ್ದಾರೆ.

ಮೂಡುಬಿದಿರೆಯ ಕಡಲಕೆರೆ ಸೃಷ್ಟಿ ಗಾರ್ಡನ್??ನಲ್ಲಿ ಮಂಗಳವಾರ (ಸೆಪ್ಟೆಂಬರ್ 8ರಂದು) ನಡೆದ ರಾಜ್ಯ ಕಂಬಳ ಅಸೋಸಿಯೇಷನ್ ಹಾಗೂ ಜಿಲ್ಲಾ ಕಂಬಳ ಸಮಿತಿಯ ಜಂಟಿ ಮಹತ್ವದ ಸಮಾಲೋಚನಾ ಸಭೆಯ ಬಳಿಕ ಅವರು ಈ ಮಾಹಿತಿ ನೀಡಿದರು.

**ಅಧಿಕೃತ ಪತ್ರ ಬಂದ ಬಳಿಕ ಪ್ರತ್ಯೇಕ ಸಭೆ:** ಮೈಸೂರು ಕಂಬಳದ ಕುರಿತು ಇದುವರೆಗೆ ಯಾವುದೇ ಅಧಿಕೃತ ಸಂವಹನ ನಡೆದಿಲ್ಲ. ಕೇವಲ ಅನಧಿಕೃತ ಚರ್ಚೆಗಳಷ್ಟೇ ನಡೆದಿವೆ. ಅಧಿಕೃತ ಆಹ್ವಾನ ಪತ್ರ ಬಂದ ಕೂಡಲೇ ಕಂಬಳ ಸಮಿತಿಯ ಪ್ರತ್ಯೇಕ ಸಭೆಯನ್ನು ಕರೆಯಲಾಗುವುದು. ಅಲ್ಲಿ ಕರಾವಳಿಯಿಂದ ಎಷ್ಟು ಜೋಡಿ ಕೋಣಗಳನ್ನು ಕಳುಹಿಸಬೇಕು, ಯಾವ ರೀತಿ ಸಾರಿಗೆ ಹಾಗೂ ವ್ಯವಸ್ಥೆ ಮಾಡಬೇಕು ಎಂಬ ಬಗ್ಗೆ ಕೂಲಂಕಷವಾಗಿ ಚರ್ಚಿಸಿ ನಿರ್ಧರಿಸಲಾಗುವುದು ಎಂದು ದೇವಿಪ್ರಸಾದ್ ಶೆಟ್ಟಿ ತಿಳಿಸಿದರು.

**ಕಂಬಳದಲ್ಲಿ ಕಟ್ಟುನಿಟ್ಟಿನ ಸಮಯಪಾಲನೆಗೆ ಕ್ರಾಂತಿಕಾರಿ ನಿರ್ಧಾರ:** ಕಂಬಳ ಕೂಟಗಳು ಅತಿಯಾಗಿ ವಿಳಂಬವಾಗುವುದನ್ನು ತಡೆಗಟ್ಟಲು ಸಭೆಯಲ್ಲಿ ಕಠಿಣ ನಿಯಮಗಳನ್ನು ಜಾರಿಗೆ ತರಲು ತೀರ್ಮಾನಿಸಲಾಗಿದೆ.

**ಮುಖ್ಯ 4 ವಿಭಾಗಗಳಿಗೆ ಪ್ರತ್ಯೇಕ ಓಟಗಾರರು/ಹಗ್ಗ ಹಿಡಿಯುವವರು:** ಕಂಬಳದ ಪ್ರಮುಖ 4 ವಿಭಾಗಗಳಾದ ಹಗ್ಗ ಹಿರಿಯ, ಹಗ್ಗ ಕಿರಿಯ, ನೇಗಿಲು ಹಿರಿಯ ಮತ್ತು ನೇಗಿಲು ಕಿರಿಯ ವಿಭಾಗಗಳಿಗೆ, ಆಯಾ ವಿಭಾಗದಲ್ಲಿ ಒಬ್ಬನೇ ಜಾಕಿ (ಓಟಗಾರ) ಅಥವಾ ಒಬ್ಬನೇ ಕೋಣ ಬಿಡುವ ವ್ಯಕ್ತಿ (ಗಿಡಾಪುನಾರ್) ಭಾಗವಹಿಸುವಂತಿಲ್ಲ. ಒಬ್ಬ ವ್ಯಕ್ತಿ ಒಂದು ವಿಭಾಗದಲ್ಲಿ ಒಂದು ಕೋಣ ಓಡಿಸಲು ಮಾತ್ರ ಭಾಗವಹಿಸಲು ಅವಕಾಶ ನೀಡಲಾಗುತ್ತದೆ. ಹಿಂದೆ ಒಬ್ಬನೇ ಓಟಗಾರ ಅಥವಾ ಹಗ್ಗ ಹಿಡಿಯುವವನು ಬೇರೆ ಬೇರೆ ಕೋಣಗಳಿಗೆ ಕರೆಯಲ್ಲಿ ನಿಲ್ಲುತ್ತಿದ್ದ ಕಾರಣ, ಇತರರು ಆತನಿಗಾಗಿ ಕಾಯಬೇಕಾಗಿ ಗಂಟೆಗಟ್ಟಲೆ ವಿಳಂಬವಾಗುತ್ತಿತ್ತು. ಈಗ 4 ಪ್ರಮುಖ ವಿಭಾಗಗಳಿಗೆ ಪ್ರತ್ಯೇಕ ವ್ಯಕ್ತಿಗಳೇ ಇರಬೇಕಾಗಿರುವುದರಿಂದ ಕಂಬಳಗಳು ನಿಗದಿತ ಸಮಯಕ್ಕೆ ಸರಾಗವಾಗಿ ಮುಕ್ತಾಯಗೊಳ್ಳಲಿವೆ. ಉಳಿದ ಎರಡು ವಿಭಾಗಗಳಾದ ಕನೆಹಲಗೆ ಮತ್ತು ಅಡ್ಡಹಲಗೆ ವಿಭಾಗಗಳ ಸ್ಪರ್ಧೆಗಳನ್ನು ಮಧ್ಯಾಹ್ನ 3 ಗಂಟೆಯ ಒಳಗೆ ಕಡ್ಡಾಯವಾಗಿ ಪೂರ್ಣಗೊಳಿಸಬೇಕು ಎಂದು ನಿರ್ಧಾರ ಮಾಡಲಾಗಿದೆ.

**ಕಂಬಳಕ್ಕೆ 5 ಕೋಟಿ ಅನುದಾನ ಘೋಷಣೆ ಸಾಧ್ಯತೆ:** ಕರಾವಳಿ ಕಂಬಳಕ್ಕೆ ಸರ್ಕಾರದಿಂದ ಶಾಶ್ವತ ಆರ್ಥಿಕ ಬಲ ತುಂಬುವ ವಿಚಾರ ಪ್ರಸ್ತಾಪಿಸಿದ ಅಧ್ಯಕ್ಷರು, ಸೆಪ್ಟೆಂಬರ್‌ನಲ್ಲಿ ಮಂಗಳೂರಿನಲ್ಲಿ ನಡೆಯಲಿರುವ ರಾಜ್ಯ ಸಚಿವ ಸಂಪುಟ ಸಭೆಯಲ್ಲಿ, ರಾಜ್ಯ ಸರ್ಕಾರವು ಬಜೆಟ್‌ನಲ್ಲಿ ಕಂಬಳಕ್ಕೆ ವಾರ್ಷಿಕ 5 ಕೋಟಿ ರೂ. ವಿಶೇಷ ಅನುದಾನವನ್ನು ಅಧಿಕೃತವಾಗಿ ಘೋಷಿಸುವ ನಿರೀಕ್ಷೆಯಿದೆ. ಈ ಸಂಬಂಧ ಕಂಬಳ ಸಮಿತಿಯು ಮುಖ್ಯಮಂತ್ರಿಗಳಿಗೆ ಹಾಗೂ ಸರ್ಕಾರಕ್ಕೆ ಕೃತಜ್ಞತೆ ಸಲ್ಲಿಸುತ್ತದೆ ಎಂದು ತಿಳಿಸಿದರು.

**ಸೆ.16ರಿಂದ ಕಾರ್ಕಳದಲ್ಲಿ ಈಜು ತರಬೇತಿ:** ಮಿಯಾರಿನಲ್ಲಿ ಇತ್ತೀಚೆಗೆ ನಡೆದ ಓಟಗಾರರ ಆಯ್ಕೆ ಪ್ರಕ್ರಿಯೆಯಲ್ಲಿ ಆಯ್ಕೆಯಾದ ಸುಮಾರು 180 ಮಂದಿ ಯುವ ಓಟಗಾರರಿಗೆ ಸೆಪ್ಟೆಂಬರ್ 12 ಮತ್ತು 13ರಂದು ಕಾರ್ಕಳದ ಕ್ರೀಡಾ ಇಲಾಖೆಯ ನೂತನ ಸ್ವಿಮ್ಮಿಂಗ್ ಪೂಲ್‌ನಲ್ಲಿ ವಿಶೇಷ ಈಜು ತರಬೇತಿ ಶಿಬಿರವನ್ನು ಆಯೋಜಿಸಲಾಗಿದೆ ಎಂದು ದೇವಿಪ್ರಸಾದ್ ಶೆಟ್ಟಿ ಬೆಳಪು ಮಾಹಿತಿ ನೀಡಿದರು.

ಸಭೆಯಲ್ಲಿ ಕಂಬಳ ಅಸೋಸಿಯೇಷನ್ ಹಾಗೂ ಜಿಲ್ಲಾ ಸಮಿತಿಯ ಪ್ರಮುಖ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಬಂದೂಕಿನಿಂದ ಜಿಂಕೆ ಕೊಂದು ಪರಾರಿ



ಚಾಮರಾಜನಗರ: ಮಲೆ ಮಹದೇಶ್ವರ ವನ್ಯಜೀವಿಧಾಮದಲ್ಲಿ ಕಳ್ಳಬೇಟೆ ಪ್ರಕರಣ ಮುಂದುವರೆದಿದ್ದು, ನಾಡಬಂದೂಕಿನಿಂದ ಜಿಂಕೆಯನ್ನು ಕೊಂದು ಬೇಟೆಗಾರರು ಪರಾರಿಯಾದ ಘಟನೆ ಹನೂರು ಬಫರ್ ವಲಯದ ಪಚ್ಚೆದೊಡ್ಡಿ ಶಾಖೆಯಲ್ಲಿ ನಡೆದಿದೆ. ರಾತ್ರಿ ಗಸ್ತು ನಡೆಸುವಾಗ ಕಾಡಿನಲ್ಲಿ ಗುಂಡಿನ ಶಬ್ಧ ಕೇಳಿದ್ದರಿಂದ ಅರಣ್ಯ ಇಲಾಖೆ ಕೂಂಬಿಂಗ್ ಕೈಗೊಂಡ ವೇಳೆ ಜಿಂಕೆ ಕಳೇಬರ ಪತ್ತೆಯಾಗಿದೆ.

ಮೃತ ಜಿಂಕೆ ಗಂಡಾಗಿದ್ದು, ಮುಂಗಾಲುಗಳು ಮತ್ತು ಎದೆಭಾಗ ಇಲ್ಲದ ಸ್ಥಿತಿಯಲ್ಲಿ ಸಿಕ್ಕಿದೆ. ವನ್ಯಜೀವಿ ಅಪರಾಧ ವರದಿ ದಾಖಲು ಮಾಡಲಾಗಿದೆ ಎಂದು ಮಲೆಮಹದೇಶ್ವರ ವನ್ಯಜೀವಿಧಾಮದ ಉಪ ಅರಣ್ಯ ಸಂರಕ್ಷಣಾಧಿಕಾರಿ ಮಾಹಿತಿ ನೀಡಿದ್ದಾರೆ.

**ವಾರದಲ್ಲಿ ಎರಡನೇ ಕೇಸ್:** ನಾಡ ಬಂದೂಕಿನಿಂದ ಕಡವೆ ಕೊಂದು ಮೂರು ಭಾಗ ಮಾಡಿ ಕಳ್ಳಬೇಟೆಗಾರರು ಹೊತ್ತೊಯ್ಯುತ್ತಿದ್ದರು. ಈ ವೇಳೆ, ಅರಣ್ಯ ಇಲಾಖೆ ಸಿಬ್ಬಂದಿಯನ್ನು ನೋಡಿ ಕಳ್ಳಬೇಟೆಗಾರರು ಪರಾರಿಯಾದ ಘಟನೆ ಹನೂರು ತಾಲೂಕಿನ ಉಡುತೊರೆಹಳ್ಳ ಡ್ಯಾಂ ಬಳಿ ಸೆ.1 ರ ರಾತ್ರಿ ನಡೆದಿತ್ತು.

ಉಡುತೊರೆಹಳ್ಳ ಡ್ಯಾಂ ನ ಹಿನ್ನೀರಿನಲ್ಲಿ ಸೆ.1 ರ ರಾತ್ರಿ ಅರಣ್ಯ ಸಿಬ್ಬಂದಿ ಗಸ್ತು ನಡೆಸುವಾಗ ನಾಲ್ವರು ಬೇಟೆಗಾರರು ನಾಡ ಬಂದೂಕು ಹಿಡಿದು ತಲೆ ಮೇಲೆ ಚೀಲ ಹೊತ್ತು ಬರುವುದನ್ನು ಕಂಡಿದ್ದಾರೆ. ಈ ವೇಳೆ, ಅಲರ್ಟ್ ಆದ ಕಳ್ಳಬೇಟೆಗಾರರು ಚೀಲ ಬಿಸಾಡಿ ಪರಾರಿಯಾಗಿದ್ದಾರೆ. ಚೀಲಗಳನ್ನು ಪರಿಶೀಲಿಸಿದಾಗ ಕಡವೆಯನ್ನು ನಾಡ ಬಂದೂಕಿನಿಂದ ಕೊಂದು ಮೂರು ಭಾಗಗಳಾಗಿ ಕತ್ತರಿಸಿ ಚೀಲಕ್ಕೆ ತುಂಬಿರುವುದು ಕಂಡು ಬಂದಿತ್ತು. ಸದ್ಯ, ಈ ಘಟನೆ ಸಂಬಂಧ ಕೇಸ್ ದಾಖಲಾಗಿದೆ. ಈಗ ಮತ್ತೊಂದು ಕಳ್ಳಬೇಟೆ ಪ್ರಕರಣ ನಡೆದಿದೆ.

# ಹನೂರು ಶೂಟೌಟ್ ಪ್ರಕರಣ: ಅರಣ್ಯ ಸಿಬ್ಬಂದಿಗೆ ಜಾಮೀನು ಮಂಜೂರು



ಚಾಮರಾಜನಗರ: ಜಿಲ್ಲೆಯ ಹನೂರು ತಾಲೂಕಿನ ಕಾವೇರಿ ವನ್ಯಜೀವಿಧಾಮದಲ್ಲಿ ಕಳೆದ ಆಗಸ್ಟ್? 15 ರಂದು ನಡೆದಿದ್ದ ಶೂಟೌಟ್ ಪ್ರಕರಣದಲ್ಲಿ ಭಾಗಿಯಾಗಿದ್ದ ಅರಣ್ಯ ರಕ್ಷಕ ಶಿವರಾಜ್ ಸಾಸಲವಾಡೆ, ಅರಣ್ಯ ವೀಕ್ಷಕರಾದ ಶಿವಲಿಂಗ ನಾಯ್ಕ ಮತ್ತು ಗಿರೀಶ್ ಅವರಿಗೆ ಕೊಳ್ಳೇಗಾಲದ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯವು ನಿರೀಕ್ಷಣಾ ಜಾಮೀನು ಮಂಜೂರು ಮಾಡಿದೆ.

ಆಗಸ್ಟ್ 15ರ ಮುಂಜಾನೆ ಹೊಳೆ ಮುರಿದಟ್ಟಿ ಅರಣ್ಯ ಪ್ರದೇಶದಲ್ಲಿ ನಡೆದ ಗುಂಡಿನ ಚಕಮಕಿಯಲ್ಲಿ ಅಂತೋಣಿಸ್ವಾಮಿ, ಡೇವಿಡ್ ಕುಮಾರ್ ಮತ್ತು ಜಾನ್ ರೋಸ್ ಪೀಟರ್ ಎಂಬುವರು ಮೃತಪಟ್ಟಿದ್ದರು. ಘಟನೆ ಸಂಬಂಧ ಸರ್ಕಾರ ಸಮಗ್ರ ತನಿಖೆಯನ್ನು ಸಿಐಡಿಗೆ ವಹಿಸಿದ್ದು, ಸಿಐಡಿ ಎಸ್‌ಪಿ ಉಮಾ ಪ್ರಶಾಂತ್ ನೇತೃತ್ವದಲ್ಲಿ ತನಿಖೆ ನಡೆಸಲಾಗುತ್ತಿದೆ.

ಕಾವೇರಿ ವನ್ಯಜೀವಿಧಾಮದ ಹೊಳೆ ಮುರಿದಟ್ಟಿ ಅರಣ್ಯದ ಕರಿಕಲ್ಲು ಗುಡ್ಡ ಅಥವಾ ಕರಡಿಕಲ್ಲುಗುಡ್ಡ ಎಂದು ಕರೆಯುವ ಸ್ಥಳದಲ್ಲಿ ನಡೆದ ಶೂಟ್‌ಔಟ್ ಪ್ರಕರಣದಲ್ಲಿ ಭಾಗಿಯಾಗಿದ್ದ ಅರಣ್ಯ ರಕ್ಷಕ ಶಿವರಾಜ್ ಸಾಸಲವಾಡೆ, ವಾಚರ್‌ಗಳಾದ ಶಿವಲಿಂಗ ನಾಯ್ಕ ಮತ್ತು ಗಿರೀಶ್ ಅವರಿಗೆ ಕೊಳ್ಳೇಗಾಲದ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯವು ನಿರೀಕ್ಷಣಾ ಜಾಮೀನು ಮಂಜೂರು ಮಾಡಿದೆ.

**ಅರಣ್ಯ ಇಲಾಖೆಯ ವಾದವೇನು:** ನಾಲ್ವರು ಕಾವೇರಿ ವನ್ಯಜೀವಿಧಾಮಕ್ಕೆ ಅಕ್ರಮವಾಗಿ ಪ್ರವೇಶಿಸಿ ಬೇಟೆಯಾಡಲು ಯತ್ನಿಸುತ್ತಿದ್ದಾರೆ ಎಂಬ ಖಚಿತ ಮಾಹಿತಿ ಆಧರಿಸಿ ಇಲಾಖೆಯು ಎರಡು ವಿಶೇಷ ತಂಡಗಳನ್ನು ರಚಿಸಿ ಗಸ್ತು ನಡೆಸುತ್ತಿತ್ತು. ಮುಂಜಾನೆ ನಾಲ್ವರು ವ್ಯಕ್ತಿಗಳನ್ನು ಗುರುತಿಸಿದ ಅರಣ್ಯ ಸಿಬ್ಬಂದಿ ಶರಣಾಗುವಂತೆ ಸೂಚಿಸಿದ್ದಾರೆ. ಈ ವೇಳೆ ಬೇಟೆಗಾರರು ಸಿಬ್ಬಂದಿ ಮೇಲೆ ಗುಂಡು ಹಾರಿಸಿದ್ದಾರೆ ಎಂಬುದು ಇಲಾಖೆಯ ಆರೋಪವಾಗಿದೆ. ಆತ್ಮರಕ್ಷಣೆಗಾಗಿ ತಾವು ಪ್ರತಿದಾಳಿ ನಡೆಸಬೇಕಾಯಿತು ಎಂದು ಅರಣ್ಯ ಇಲಾಖೆ ಸರ್ಕಾರಕ್ಕೆ ವರದಿ ಸಲ್ಲಿಸಿದೆ.

**ಮಲಗಿದ್ದವರ ಮೇಲೆ ಗುಂಡು ಹಾರಿಸಿ ಕೊಲೆ ಆರೋಪ:** ಮೃತರ ಕುಟುಂಬಸ್ಥರು ಮತ್ತು ಶೂಟೌಟ್‌ನಲ್ಲಿ ಕಾಲ್ಕಿತ್ತು ಬದುಕುಳಿದ ಮಹಿಮಾದಾಸ್ ಪ್ರಕಾರ, ಕಾಣೆಯಾಗಿದ್ದ ಹಸು ಹುಡುಕಲು ಅರಣ್ಯಕ್ಕೆ ತೆರಳಿ, ಅಲ್ಲಿ ಮಲಗಿದ್ದಾಗ ಏಕಾಏಕಿ ಗುಂಡು ಹಾರಿಸಿ ಕೊಲೆ ಮಾಡಿದ್ದಾರೆ ಎಂದು ಆರೋಪಿಸಿದ್ದಾರೆ. ಈ ಬಗ್ಗೆ, ಹನೂರು ಪೊಲೀಸ್ ಠಾಣೆಯಲ್ಲಿ ಮೃತ ಆಂತೋಣಿಸ್ವಾಮಿ ಪತ್ನಿ ಲೂರ್ದಾ ಮೇರಿ ದೂರು ನೀಡಿದ್ದು, ಪ್ರಕರಣ ಕೂಡ ದಾಖಲಾಗಿದೆ.

**ತನಿಖೆ ನಡೆಸುತ್ತಿರುವ ಸಿಐಡಿ:** ಘಟನೆ ಸಂಬಂಧ ಸರ್ಕಾರ ಮೊದಲು ಮ್ಯಾಜಿಸ್ಟ್ರೇಟ್ ತನಿಖೆಗೆ ಆದೇಶಿಸಿತ್ತು. ಬಳಿಕ ಪ್ರಕರಣದ ಸಮಗ್ರ ತನಿಖೆಯನ್ನು ಸಿಐಡಿಗೆ ವಹಿಸಲಾಗಿದೆ. ಸಿಐಡಿ ಎಸ್‌ಪಿ ಉಮಾ ಪ್ರಶಾಂತ್, ಡಿವೈಎಸ್‌ಪಿಗಳಾದ ಮೇರಿ ಶೈಲಜಾ ಮತ್ತು ವೈ.ಎಸ್. ಜಹಗಿರ್ದಾರ್, ನಾಲ್ವರು ಇನ್ಸ್‌ಪೆಕ್ಟರ್‌ಗಳು ಸೇರಿ ನಾಲ್ಕು ತಂಡಗಳು ಕಳೆದ 10 ದಿನಗಳಿಂದ ಹನೂರು, ರಾಮಾಪುರ ಮತ್ತು ಕೊಳ್ಳೇಗಾಲ ಗ್ರಾಮಾಂತರ ಪೊಲೀಸ್ ಠಾಣೆಗಳಲ್ಲಿ ದಾಖಲಾಗಿರುವ ನಾಲ್ಕು ಪ್ರಕರಣಗಳ ಸಂಬಂಧ ತನಿಖೆ ನಡೆಸುತ್ತಿವೆ.

ಅರಣ್ಯ ರಕ್ಷಕ ಮತ್ತು ವಾಚರ್‌ಗಳು ಹಾಗೂ ಇತರೆ ಸಿಬ್ಬಂದಿಯನ್ನು ಸಿಐಡಿ ತನಿಖಾ ತಂಡ ವಿಚಾರಣೆಗೆ ಒಳಪಡಿಸಿದೆ. ಈ ಮಧ್ಯೆ, ಫಾರೆಸ್ಟ್ ಗಾರ್ಡ್ ಶಿವರಾಜ್ ಸಾಸಲವಾಡೆ, ವಾಚರ್??ಗಳಾದ ಶಿವಲಿಂಗ ನಾಯ್ಕ ಮತ್ತು ಗಿರೀಶ್ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯಕ್ಕೆ ನಿರೀಕ್ಷಣಾ ಜಾಮೀನು ಕೋರಿ ಅರ್ಜಿ ಸಲ್ಲಿಸಿದ್ದರು.

# ಆಕಸ್ಮಿಕವಾಗಿ ವಿದ್ಯುತ್ ಪ್ರವಹಿಸಿ ಯುವಕ ಸಾವು



ತುರುವೇಕೆರೆ: ಆಕಸ್ಮಿಕವಾಗಿ ವಿದ್ಯುತ್ ಪ್ರವಹಿಸಿ ಯುವಕನೊಬ್ಬ ಮೃತಪಟ್ಟಿರುವ ಘಟನೆ ತಾಲೂಕಿನ ಮುನಿಯೂರು ವೀವಾಕನಂದ ಗ್ರಾಮದಲ್ಲಿ ಸಂಭವಿಸಿದೆ. ತಾಲೂಕಿನ ಮಾದಪಟ್ಟಣ ಗ್ರಾಮದ ಸಿದ್ದಲಿಂಗಪ್ಪ ಎಂಬುವವರ ಪುತ್ರ ರಾಘವೇಂದ್ರ( 28) ಮೃತ ದುರ್ದೈವಿಯಾಗಿದ್ದು. ಸುಮಾರು ವರ್ಷದಿಂದ ಎಲೆಕ್ಟ್ರಿಷಿಯನ್, ಪ್ಲಂಬರ್ ಹಾಗೂ ಸೋಲಾರ್ ಅಳವಡಿಕೆ ಕೆಲಸ ಮಾಡುತ್ತಿದ್ದರು. ಮುನಿಯೂರು ಗ್ರಾಮದ ವಿವೇಕಾನಂದ ನಗರದ ರಂಗೇಗೌಡ ಎಂಬುವವರ ಮನೆಯಲ್ಲಿ ಎಲೆಕ್ಟ್ರಿಕಲ್ ಹಾಗೂ ಪ್ಲಂಬಿಂಗ್ ಕೆಲಸಕ್ಕೆಂದು ತೆರಳಿದ್ದರು. ಸಂಜೆ ಗೋಡೆ ಕೊರೆಯುವ ಯಂತ್ರದ ವೈರ್‌ನಿಂದ ಆಕಸ್ಮಿಕವಾಗಿ ವಿದ್ಯುತ್ ತಗುಲಿದೆ. ತಕ್ಷಣವೇ ಅವರನ್ನು ಚಿಕಿತ್ಸೆಗಾಗಿ ತುರುವೇಕೆರೆ ಸಾರ್ವಜನಿಕ ಆಸ್ಪತ್ರೆಗೆ ಕರೆತಂದರು ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿರುವುದಾಗಿ ವೈದ್ಯರು ತಿಳಿಸಿದ್ದಾರೆ. ಮೃತನು ತಂದೆ, ತಾಯಿ, ಅಕ್ಕನನ್ನು ಅಗಲಿದ್ದಾನೆ. ಕುಟುಂಬಕ್ಕೆ ಆಸರೆಯಾಗಿದ್ದ ಪುತ್ರನನ್ನು ಕಳೆದುಕೊಂಡ ಪೋಷಕರ ಆಕ್ರಂದನ ಮುಗಿಲುಮುಟ್ಟಿತ್ತು. ಮಂಗಳವಾರ ಸ್ವಗ್ರಾಮದಲ್ಲಿ ಅಂತ್ಯ ಸಂಸ್ಕಾರ ನಡೆಯಿತು..ಪಟ್ಟಣದ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು. ಪಿಎಸ್‌ಐ ಮೂರ್ತಿ ಟಿ. ತನಿಖೆ ಕೈಗೊಂಡಿದ್ದಾರೆ.

# ಗಣಪತಿ ಪ್ರತಿಷ್ಠಾಪನೆಗೆ ಅನುಮತಿ ಕಡ್ಡಾಯ






ತುಮಕೂರು: ಗಣಪತಿ ಹಬ್ಬವನ್ನು ಹಬ್ಬವಾಗಿ ಆಚರಿಸಲು ಪೊಲೀಸ್ ಇಲಾಖೆಯಿಂದ ಯಾವುದೇ ತೊಂದರೆಯಿಲ್ಲ. ಸಾರ್ವಜನಿಕರಿಗೆ ತೊಂದರೆಯಾಗುವ ರೀತಿಯಲ್ಲಿ ನಡೆದುಕೊಂಡರೆ ಕಾನೂನಿನ ರೀತಿ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಶೋಕ್ ಕೆ.ವಿ. ಎಚ್ಚರಿಕೆ ನೀಡಿದ್ದಾರೆ. ನಗರದ ಚಿಲುಮೆ ಸಮುದಾಯಭವನದಲ್ಲಿ ಗೌರಿ ಗಣೇಶ ಹಬ್ಬದ ಹಿನ್ನೆಲೆಯಲ್ಲಿ ಕರೆದಿದ್ದ ತುಮಕೂರು ತಾಲೂಕು ಗಣಪತಿ ಪ್ರತಿಷ್ಠಾಪನಾ ಸಮಿತಿಗಳ ಪಧಾಧಿಕಾರಿಗಳ ಶಾಂತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಡಿಜೆಗೆ,ಮಾಡಿಫೈಡ್ ವೆಹಿಕಲ್‌ಗಳಲ್ಲಿ ಬರುವ ಟ್ಯಾಬ್ಲೋಗಳಿಗೆ ಅವಕಾಶವಿಲ್ಲ.

ಒಂದು ಗಣಪತಿಗೆ ಎರಡು ಸ್ಪೀಕರ್ ಬಳಸಲು ಅವಕಾಶವಿದೆ. ಮನೆಯ ಒಳಗೆ ಪ್ರತಿಷ್ಠಾಪಿಸುವ ಗಣಪತಿಗಳನ್ನ ಹೊರತು ಪಡಿಸಿ,ಬಯಲಿನಲ್ಲಿ ಪೂಜಿಸುವ ಎಲ್ಲಾ ಗಣಪತಿಗಳಿಗೂ ಅನುಮತಿ ಕಡ್ಡಾಯ ಎಂದು ಸ್ಪಷ್ಟಪಡಿಸಿದರು.

ಡಿಜೆ ಬಳಸಲು ಸುಪ್ರಿಂ ಕೋರ್ಟು ನಿರ್ಬಂದಿಸಿದೆ.ಸಾರ್ವಜನಿಕ ಸ್ಥಳ, ಸ್ಕೂಲು, ಕಾಲೇಜು, ಆಸ್ಪತ್ರೆಗಳು ಹಾಗೂ ವ್ಯಾಪಾರಿ ಸ್ಥಳಗಳ ಮುಂದೆ ಜನರಿಗೆ ತೊಂದರೆಯಾಗದಂತೆ ಮೆರವಣಿಗೆ ಶಾಂತ ರೀತಿಯಿಂದ ನಡೆಯಬೇಕಿದೆ.ಮುಂಚೆಯೇ ಪೊಲೀಸ್ ಇಲಾಖೆಗೆ ತಿಳಿಸಿದರೆ,ಉತ್ಸವದ ದಿನ ಎಲ್ಲಾ ರೀತಿಯ ಮುಂಜಾಗ್ರತಾ ಕ್ರಮಗಳನ್ನು ಇಲಾಖೆ ತೆಗೆದುಕೊಂಡು,ಗಣೇಶ ಮೆರವಣಿಗೆ ಸುಗಮವಾಗಿ ಸಾಗಲು ಅನುವು ಮಾಡಿಕೊಡಲಾಗುವುದು.ಹಾಗಾಗಿ ಗಣಪತಿ ವಿಸರ್ಜನೆಯ ದಿನಾಂಕ ಮತ್ತು ರೂಟ್ ಮ್ಯಾಪ್ ಮೊದಲೇ ತಿಳಿಸಿದರೆ, ಸೂಕ್ತ ಬಂದೋಬಸ್ತ್ಗ ನೆರವಾಗಲಿದೆ.ಸಾಮೂಹಿಕ ಗಣಪತಿ ವಿಸರ್ಜನೆಗೆ ಮುಂದಾದರೆ ಅದಕ್ಕೂ ಸಹ ಪೊಲೀಸ್ ಇಲಾಖೆ ಸಹಕರಿಸಲಿದೆ ಎಂದರು.

ಗಣಪತಿ ಪ್ರತಿಷ್ಠಾಪನೆಗೆ ಬೇಕಾದ ಎಲ್ಲಾ ಅನುಮತಿ ಗಳನ್ನು ಸಿಂಗಲ್ ವಿಂಡೋ(ಏಕಗವಾಕ್ಷಿ) ಮೂಲಕ ವಿತರಿಸಲು ಎಲ್ಲಾ ಕ್ರಮ ಕೈಗೊಳ್ಳಲಾ ಗಿದೆ. ಕೆ.ಇ.ಬಿ. ಅನುಮತಿಗೆ ಅವರು ಸ್ಥಳ ಪರಿಶೀಲನೆ ಮಾಡಬೇಕಿರುವುದರಿಂದ ಕೊಂಚ ವಿಳಂಬವಾಗಲಿದ್ದು, ಅವರಿಗೂ ಸಹ ನಿಗಧಿತ ಅವಧಿಯೊಳಗೆ ಅನುಮತಿ ನೀಡುವಂತೆ ಕೋರಲಾಗುವುದು ಎಂದ ಎಸ್.ಪಿ. ಅಶೋಕ್ ಕೆ.ವಿ., ಫ್ಲೆಕ್ಸ್ ಮತ್ತು ಬ್ಯಾನರ್‌ಗಳನ್ನು ಬಿ.ಹೆಚ್.ರಸ್ತೆಯ ಎರಡು ಬದಿಯ ಕಟ್ಟಲು ಅವಕಾಶವಿದೆ.

ಇದಕ್ಕೆ ಸ್ಥಳೀಯ ಸಂಸ್ಥೆಯ ಪರವಾನಗಿ ಅಗತ್ಯ.ಆದರೆ ರಸ್ತೆಯ ಮದ್ಯದಲ್ಲಿ ಕಟ್ಟಲು ಅವಕಾಶವಿಲ್ಲ ಮತ್ತು ಒಂದು ಧರ್ಮ,ಸಮುದಾಯವನ್ನು ಹಿಯಾಳಿಸುವ ನಿಷೇಧಿತ ಪದಗಳನ್ನು ಮುದ್ರಿಸುವಂತಿಲ್ಲ.ಈಗಾಗಲೇ ಮುದ್ರಕರ ಸಭೆಯಲ್ಲಿ ಅವರಿಗೆ ಸೂಚನೆ ನೀಡಲಾಗಿದೆ. ತಾವುಗಳು ಒಂದು ಸಮುದಾಯವನ್ನು ಗುರಿಯಾಗಿಸಿದ ಯಾವುದೇ ಫ್ಲೆಕ್ಸ್, ಬ್ಯಾನರ್ ಬಳಕೆ ಮಾಡುವಂತಿಲ್ಲ ಎಂದರು.

ಗಣಪತಿ ಪ್ರತಿಷ್ಠಾಪನೆ, ಉತ್ಸವ ಮತ್ತು ವಿಸರ್ಜನೆ ಸಂದರ್ಭದಲ್ಲಿ ಮಹಿಳೆಯರು ಮತ್ತು ಮಕ್ಕಳ ಸುರಕ್ಷತೆಗೆ ಹೆಚ್ಚಿನ ಗಮನವನ್ನು ಪೊಲೀಸ್ ಇಲಾಖೆ ಹರಿಸಲಿದೆ. ಆಯೋಜಕರು ನಿಗಾವಹಿಸಬೇಕು.ಗಣಪತಿ ಕೂರಿಸುವ ಸ್ಥಳದಲ್ಲಿ ಸಿಸಿಟಿವಿ ಕ್ಯಾಮರ ಕಡ್ಡಾಯ,ಇದರಿಂದ ಮುಂದಾಗಬಹುದಾದ ಅನಾಹುತ ತಪ್ಪಿಸಲು, ಹಾಗೂ ಆಗಿರಬಹುದಾದ ಅನಾಹುತಕ್ಕೆ ಕಾರಣ ಏನು ಎಂದು ತಿಳಿದುಕೊಳ್ಳಲು ಸಹಕಾರಿಯಾಗಲಿದೆ.

ಇದರಿಂದ ಪರಿಸ್ಥಿತಿಯ ಲಾಭ ಪಡೆದು ಸಮಾಜ ವಿದ್ರೋಹಿ ಶಕ್ತಿಗಳು ಲಾಭ ಪಡೆಯುವುದನ್ನು ತಡೆಗಟ್ಟಬಹುದು.ನಗರದಲ್ಲಿ ಸುಮಾರು 500ಕ್ಕೂ ಹೆಚ್ಚು ಕ್ಯಾಮರಗಳ ಮೂಲಕ ಪ್ರತಿಯೊಂದ ಏರಿಯಾದ ಚಲನವಲನಗಳನ್ನು ಪೊಲೀಸ್ ಇಲಾಖೆ ಗಮನಿಸುತ್ತಿದೆ.ಕುಡಿದು ಬಂದ ಗಲಾಟೆ ಮಾಡುವುದು, ಸಾರ್ವಜನಿಕರಿಗೆ ತೊಂದರೆ ನೀಡಿದರೆ ಕಾನೂನಿನ ಕುಣಿಕೆ ಬಿಗಿಯಾಗಲಿದೆ.ಗಣಪತಿ ಹಬ್ಬವನ್ನು ಶಾಂತವಾಗಿ, ಸಂತೋಷದಿಂದ ಎಲ್ಲರೂ ಹಬ್ಬದ ರೀತಿ ಆಚರಿಸಲು ಪೊಲೀಸ್ ಇಲಾಖೆಯ ಸಹಕಾರವಿದೆ ಎಂದು ಎಸ್.ಪಿ ಅಶೋಕ್ ಕೆ.ವಿ ತಿಳಿಸಿದರು.

ಎಎಪಿ ಗೋಪಾಲ್ ಪ್ರಾಸ್ತಾವಿಕವಾಗಿ ಮಾತನಾಡಿ, ಗಣಪತಿ ವಿಸರ್ಜನೆ, ಉತ್ಸವ ಮತ್ತು ವಿಸರ್ಜನೆ ಎಲ್ಲವೂ ಶಾಂತ ರೀತಿಯಲ್ಲಿ ನಡೆಯಬೇಕೆಂಬುದು ಪೊಲೀಸ್ ಇಲಾಖೆಯ ಆಶಯವಾಗಿದೆ.ಕಳೆದ ಮೂರು ವರ್ಷಗಳಿಂದ ಯಾವುದೇ ರೀತಿಯ ಅಹಿತಕರ ಘಟನೆಯಿಲ್ಲದೆ ನಡೆದುಕೊಂಡು ಬರುತ್ತಿದೆ. ಈ ವರ್ಷವೂ ಅದೇ ರೀತಿ ನಡೆಸಲು ಆಯೋಜಕರುಗಳು ಸಹಕರಿಸಬೇಕೆಂಬುದು ನಮ್ಮ ಮನವಿ.ಸೋಷಿಯಲ್ ಮೀಡಿಯಾದಲ್ಲಿ ಬರುವ ಕಂಟೆಂಟ್‌ಗಳನ್ನು ವೈರಲ್ ಮಾಡುವ ಮೊದಲು ಅದರ ಸೂಕ್ಷ ಮತೆಯನ್ನು ಅರ್ಥ ಮಾಡಿಕೊಳ್ಳಬೇಕು.ಇಲ್ಲದಿದ್ದಲ್ಲಿ ತಪ್ಪಿಗೆ ಸಿಕ್ಕಿ ಹಾಕಿಕೊಳ್ಳುವ ಅಪಾಯವಿದೆ.ಪೊಲೀಸ್ ಇಲಾಖೆ ದಿನದ 24 ಗಂಟೆಗಳ ಕಾಲವೂ ನಿಮ್ಮೊಂದಿಗೆ ಕೆಲಸ ಮಾಡಲು ಸಿದ್ದವಿದೆ.ಸೂಕ್ಷ ಮ ಸ್ಥಳಗಳಲ್ಲಿ ಮೆರವಣಿಗೆ ಸಾಗುವಾಗ ತಾಳ್ಮೆ ಇರಲಿ. ಪ್ರಚೋಧನೆಗೆ ಒಳಗಾಗುವುದು ಬೇಡ ಎಂದರು. ಸಭೆಯಲ್ಲಿ ತುಮಕೂರು ನಗರ ಡಿವೈಎಸ್ಪಿ ಚಂದ್ರಶೇಖರ್, ಗ್ರಾಮಾಂತರ ಡಿವೈಎಸ್ಪಿ ಪುಟ್ಟೇಗೌಡ ಹಾಗೂ ಪೊಲೀಸ್ ಸಿಬ್ಬಂದಿಗಳು,ವಿವಿಧ ಗಣಪತಿ ಪ್ರತಿಷ್ಠಾಪನಾ ಸಮಿತಿಗಳ ಆಯೋಜಕರುಗಳ ಭಾಗವಹಿಸಿದ್ದರು.

# ಆಧಾರ್–ಪಹಣಿ ಜೋಡಣೆ ಕಡ್ಡಾಯ



ಹುಳಿಯಾರು: ತಾಲ್ಲೂಕಿನ ಎಲ್ಲಾ ರೈತರು ತಮ್ಮ ಜಮೀನಿನ ಪಹಣಿಗಳನ್ನು ಎಫ್.ಐ.ಡಿ ಹಾಗೂ ಆಧಾರ್ ಸಂಖ್ಯೆಯೊಂದಿಗೆ ಕಡ್ಡಾಯವಾಗಿ ಜೋಡಣೆ ಮಾಡಿಸಬೇಕು ಎಂದು ಚಿಕ್ಕನಾಯಕನಹಳ್ಳಿ ಸಹಾಯಕ ಕೃಷಿ ನಿರ್ದೇಶಕರಾದ ಎಚ್. ಎಸ್.ಶಿವರಾಜ್ ಕುಮಾರ್ ತಿಳಿಸಿದ್ದಾರೆ. ಈ ಸಂಬಂಧ ಪತ್ರಿಕಾ ಹೇಳಿಕೆ ನೀಡಿರುವ ಅವರು ಕೇಂದ್ರ ಮತ್ತು ರಾಜ್ಯ ಸರ್ಕಾರದ ವಿವಿಧ ಇಲಾಖೆಗಳ ಸೌಲಭ್ಯಗಳು ನೇರವಾಗಿ ರೈತರಿಗೆ ತಲುಪಲು ಈ ದಾಖಲಾತಿ ಅನಿವಾರ್ಯವಾಗಿದೆ. ಕೃಷಿ ಇಲಾಖೆಯ ವತಿಯಿಂದ ರಿಯಾಯಿತಿ ದರದಲ್ಲಿ ಬಿತ್ತನೆ ಬೀಜ, ರಸಗೊಬ್ಬರ ಹಾಗೂ ಇತರೆ ಕೃಷಿ ಪರಿಕರಗಳನ್ನು ಪಡೆಯಲು. ಬರಗಾಲದಂತಹ ತುರ್ತು ಪರಿಸ್ಥಿತಿಗಳಲ್ಲಿ ಸರ್ಕಾರದಿಂದ ಘೋಷಿಸುವ ಬೆಳೆ ಪರಿಹಾರಕ್ಕೆ ಅರ್ಜಿ ಸಲ್ಲಿಸಲು. ಪ್ರಧಾನಮಂತ್ರಿ ಫಾಸಲ್ ಬಿಮಾ ಯೋಜನೆಯಡಿ ಬೆಳೆ ವಿಮೆ ಪಾವತಿಸಲು ಹಾಗೂ ಕ್ಲೈಮ್ ಪಡೆಯಲು. ತೋಟಗಾರಿಕೆ, ಕಂದಾಯ, ಪಶುಸಂಗೋಪನೆ, ರೇಷ್ಮೆ, ಅರಣ್ಯ ಹಾಗೂ ಇತರೇ ಇಲಾಖೆಗಳಿಂದ ಸಿಗುವ ಸಹಾಯಧನ ಮತ್ತು ಸೌಲಭ್ಯಗಳನ್ನು ಪಡೆದುಕೊಳ್ಳಲು ಇದು ಅತ್ಯಗತ್ಯವಾಗಿದೆ. ಈ ಪ್ರಕ್ರಿಯೆಯು ಕಡ್ಡಾಯವಾಗಿದ್ದು, ತಾಲ್ಲೂಕಿನ ಸಮಸ್ತ ರೈತ ಭಾಂದವರು ಯಾವುದೇ ವಿಳಂಬವಿಲ್ಲದೆ ಆಧಾರ್ ಕಾರ್ಡ್ ಪ್ರತಿ, ಜಮೀನಿನ ಪಹಣಿ ಪತ್ರಿ, ಆಧಾರ್‌ಗೆ ಜೋಡಣೆಯಾಗಿರುವ ಸಕ್ರಿಯ ಮೊಬೈಲ್ ಸಂಖ್ಯೆ ಇರುವ ಮೊಬೈಲ್ ಫೋನ್ ನೊಂದಿಗೆ ತಮ್ಮ ಹೋಬಳಿ ವ್ಯಾಪ್ತಿಯ ರೈತ ಸಂಪರ್ಕ ಕೇಂದ್ರಗಳನ್ನು ಸಂಪರ್ಕಿಸುವಂತೆ ಶಿವರಾಜ್‌ಕುಮಾರ್ ತಿಳಿಸಿದ್ದಾರೆ .

# ಹಳೇತಿಮ್ಮನಹಳ್ಳಿಯಲ್ಲಿ ಭಕ್ತರ ಒಗ್ಗಟ್ಟಿನ ಫಲವಾಗಿ ಜೀರ್ಣೋದ್ಧಾರ



ಮಧುಗಿರಿ :ದೇವಾಲಯಗಳು ಕೇವಲ ಪೂಜಾ ಸ್ಥಳಗಳಲ್ಲ, ಮನುಷ್ಯನಲ್ಲಿ ಭಕ್ತಿ, ಶ್ರದ್ಧೆ, ದಯೆ, ಪ್ರೀತಿ ಹಾಗೂ ಹಿರಿಯರನ್ನು ಗೌರವಿಸುವಂತಹ ದೈವೀ ಗುಣಗಳನ್ನು ಬೆಳೆಸುವ ಆಧ್ಯಾತ್ಮಿಕ ಕೇಂದ್ರಗಳಾಗಿವೆ. ಹಳೇತಿಮ್ಮನಹಳ್ಳಿ ಗ್ರಾಮಸ್ಥರು ಹಾಗೂ ಭಕ್ತರು ಒಗ್ಗಟ್ಟಿನಿಂದ ಕೈಗೊಂಡಿರುವ ಶ್ರೀ ಬಸವೇಶ್ವರ ದೇವಾಲಯದ ಜೀರ್ಣೋದ್ಧಾರ ಕಾರ್ಯವು ಶ್ಲಾಘನೀಯವಾಗಿದ್ದು, ಶಿಲಾ ಮಂಟಪ ಸೇರಿದಂತೆ ಕಲ್ಲಿನಿಂದ ನಿರ್ಮಿಸಿರುವ ದೇವಾಲಯವು ಹಲವು ತಲೆಮಾರುಗಳವರೆಗೆ ಉಳಿಯುವಂತಹ ಶಾಶ್ವತ ನಿರ್ಮಾಣವಾಗಿದೆ ಎಂದು ಸಿದ್ದರಬೆಟ್ಟದ ಬಾಳೆಹೊನ್ನೂರು ಮಠದ ಪೀಠಾಧ್ಯಕ್ಷರಾದ ಶ್ರೀ ವೀರಭದ್ರ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ತಾಲ್ಲೂಕಿನ ಪುರವರ ಹೋಬಳಿಯ ಹಳೇತಿಮ್ಮನಹಳ್ಳಿ ಗ್ರಾಮದಲ್ಲಿ ಶ್ರೀ ಬಸವೇಶ್ವರ ಜೀರ್ಣೋದ್ಧಾರ ಹಾಗೂ ಮಹಾಗಣಪತಿ, ಸುಬ್ರಹ್ಮಣ್ಯ, ಪಾರ್ವತಿ–ಪರಮೇಶ್ವರ, ಆದಿತ್ಯಾದಿ ನವಗ್ರಹ, ಧ್ವಜಸ್ತಂಭ, ಶಿಖರ, ಕಳಸ ಪ್ರತಿಷ್ಠಾಪನೆ ಹಾಗೂ ಕುಂಭಾಭಿಷೇಕ ಮಹೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಶಿಲಾ ಮಂಟಪ, ಕಲ್ಲಿನ ಬಾಗಿಲುಗಳು, ಗೋಪುರ, ಧ್ವಜಸ್ತಂಭ, ಕಳಸ, ನವಗ್ರಹ ಪ್ರತಿಷ್ಠಾಪನೆ ಹಾಗೂ ಗರ್ಭಗುಡಿಯ ಸುತ್ತಲಿನ ಆವರಣ ಸೇರಿದಂತೆ ದೇವಾಲಯಕ್ಕೆ ಅಗತ್ಯವಿರುವ ಎಲ್ಲ ಕಾಮಗಾರಿಗಳನ್ನು ಪರಿಪೂರ್ಣವಾಗಿ ಕೈಗೊಳ್ಳಲಾಗಿದೆ. ಇಂತಹ ದೇವಾಲಯದ ಜೀರ್ಣೋದ್ಧಾರದಲ್ಲಿ ಭಾಗವಹಿಸಿರುವುದು ಭಕ್ತರ ಜೀವನದ ಪುಣ್ಯದ ಕಾರ್ಯವಾಗಿದ್ದು, ಮುಂದಿನ ಐದಾರು ತಲೆಮಾರುಗಳಿಗೂ ಈ ದೇವಾಲಯ ಭಕ್ತಿ ಹಾಗೂ ಸಂಸ್ಕೃತಿಯ ಕೇಂದ್ರವಾಗಿ ಉಳಿಯಲಿದೆ ಎಂದರು. ದೇವಾಲಯ ನಿರ್ಮಾಣದ ಜೊತೆಗೆ ಮಕ್ಕಳಲ್ಲಿ ಬಾಲ್ಯದಿಂದಲೇ ದೇವರ ಸ್ಮರಣೆ, ದೇವಾಲಯಕ್ಕೆ ತೆರಳಿ ನಮಸ್ಕರಿಸುವುದು, ತಂದೆ–ತಾಯಿಯನ್ನು ಗೌರವಿಸುವುದು ಹಾಗೂ ಉತ್ತಮ ಸಂಸ್ಕಾರಗಳನ್ನು ಬೆಳೆಸುವ ಜವಾಬ್ದಾರಿ ಪೋಷಕರ ಮೇಲಿದೆ. ತಾಯಿಯೇ ಮಗುವಿನ ಮೊದಲ ಗುರು ಹಾಗೂ ಮನೆಯೇ ಮೊದಲ ಪಾಠಶಾಲೆಯಾಗಿರುವುದರಿಂದ, ಮಕ್ಕಳಲ್ಲಿ ದೈವೀ ಗುಣಗಳು ಬೆಳೆಸುವಂತಹ ವಾತಾವರಣವನ್ನು ಮನೆಯಲ್ಲಿ ನಿರ್ಮಿಸಬೇಕು ಎಂದು ಸಲಹೆ ನೀಡಿದರು.

ದೇವಾಲಯದ ಜೀರ್ಣೋದ್ಧಾರ ಹಾಗೂ ಧಾರ್ಮಿಕ ಕಾರ್ಯಗಳಿಗೆ ಹಲವು ದಾನಿಗಳು ಶ್ರದ್ಧೆಯಿಂದ ನೆರವು ನೀಡಿದ್ದು, ಅವರ ಸೇವೆ ಶ್ಲಾಘನೀಯವಾಗಿದೆ. ದಾನಿಗಳು, ಗ್ರಾಮಸ್ಥರು ಹಾಗೂ ಕಾರ್ಯಕ್ರಮದಲ್ಲಿ ಭಾಗವಹಿಸಿದ ಎಲ್ಲ ಭಕ್ತರಿಗೂ ದೇವರು ಆಯುಷ್ಯ, ಆರೋಗ್ಯ ಹಾಗೂ ಸುಖ–ಸಮೃದ್ಧಿಯನ್ನು ಕರುಣಿಸಲಿ ಎಂದು ಪ್ರಾರ್ಥಿಸಿದ ಅವರು, ಮುಂದಿನ ಪೀಳಿಗೆಯವರೂ ದೇವಾಲಯದ ಧಾರ್ಮಿಕ ಪರಂಪರೆಯನ್ನು ಮುಂದುವರಿಸಿಕೊಂಡು ಹೋಗಬೇಕು ಎಂದು ಆಶಿಸಿದರು.

ಎಲೆರಾಂಪುರ ಮಠದ ಪೀಠಾಧ್ಯಕ್ಷರಾದ ಡಾ. ಶ್ರೀ ಹನುಮಂತನಾಥ ಮಹಾಸ್ವಾಮೀಜಿ ಮಾತನಾಡಿ, ಮಕ್ಕಳ ಮನಸ್ಸಿನಲ್ಲಿ ಚಿಕ್ಕ ವಯಸ್ಸಿನಿಂದಲೇ ದ್ವೇಷವನ್ನು ಬಿತ್ತುವ ಬದಲು ಪ್ರೀತಿ, ಸಹೋದರತ್ವ, ಮಾನವೀಯತೆ ಹಾಗೂ ಹಿರಿಯರನ್ನು ಗೌರವಿಸುವ ಸಂಸ್ಕಾರವನ್ನು ಬೆಳೆಸಬೇಕು. ಪೋಷಕರು ನಡೆದುಕೊಳ್ಳುವ ರೀತಿ ಹಾಗೂ ಮನೆಯಲ್ಲಿ ನಡೆಯುವ ವಿಚಾರಗಳು ಮಕ್ಕಳ ಮನಸ್ಸಿನ ಮೇಲೆ ಗಾಢ ಪರಿಣಾಮ ಬೀರುವುದರಿಂದ, ಮಕ್ಕಳಿಗೆ ಉತ್ತಮ ಆದರ್ಶವಾಗುವಂತೆ ಪೋಷಕರು ನಡೆದುಕೊಳ್ಳಬೇಕು ಎಂದು ಹೇಳಿದರು.

ಇಂದಿನ ದಿನಗಳಲ್ಲಿ ಶಿಕ್ಷಣವೆಂದರೆ ಕೇವಲ ಅಂಕ, ಪದವಿ ಹಾಗೂ ಹಣ ಗಳಿಸುವುದಕ್ಕೆ ಸೀಮಿತವಾಗಬಾರದು. ಮಣ್ಣು, ನೀರು, ಪರಿಸರ, ಬಡವರ ಬದುಕು ಹಾಗೂ ಸಾಮಾಜಿಕ ಜವಾಬ್ದಾರಿಯ ಬಗ್ಗೆ ಮಕ್ಕಳಿಗೆ ಅರಿವು ಮೂಡಿಸುವ ಮೌಲ್ಯಾಧಾರಿತ ಶಿಕ್ಷಣ ಅಗತ್ಯವಾಗಿದೆ. ಮಕ್ಕಳು ವಿದ್ಯಾವಂತರಾಗುವುದರ ಜೊತೆಗೆ ಉತ್ತಮ ಮಾನವರಾಗಿ ಬೆಳೆದು, ತಂದೆ–ತಾಯಿಯನ್ನು ವೃದ್ಧಾಪ್ಯದಲ್ಲಿ ಗೌರವದಿಂದ ನೋಡಿಕೊಳ್ಳುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದರು.

ಡಾ. ಬಿ.ಆರ್. ಅಂಬೇಡ್ಕರ್, ಸ್ವಾಮಿ ವಿವೇಕಾನಂದ, ರಾಮಕೃಷ್ಣ ಪರಮಹಂಸ, ಶಂಕರಾಚಾರ್ಯ ಹಾಗೂ ಮಹಾತ್ಮ ಗಾಂಧೀಜಿ ಸೇರಿದಂತೆ ಸಮಾಜಕ್ಕಾಗಿ ಬದುಕಿದ ಮಹನೀಯರ ಆದರ್ಶಗಳನ್ನು ಮಕ್ಕಳು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಸಮಾಜದ ಒಳಿತಿಗಾಗಿ ಸೇವಾ ಮನೋಭಾವ ಹಾಗೂ ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಂಡಾಗ ಮಾತ್ರ ಉತ್ತಮ ಸಮಾಜ ನಿರ್ಮಾಣ ಸಾಧ್ಯ ಎಂದು ತಿಳಿಸಿದರು.

ಶ್ರೀ ಶ್ರೀ ರಾಮಾನಂದ ಜೀ ಚೈತನ್ಯ ಸ್ವಾಮೀಜಿ ಮಾತನಾಡಿ, ದೇವಾಲಯಗಳು ನಮ್ಮ ಧಾರ್ಮಿಕ ನಂಬಿಕೆ ಹಾಗೂ ಸಂಸ್ಕೃತಿಯ ಪ್ರತೀಕಗಳಾಗಿದ್ದು, ಅವುಗಳ ಜೀರ್ಣೋದ್ಧಾರ ಮತ್ತು ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಭಕ್ತರು ಒಗ್ಗಟ್ಟಿನಿಂದ ಕೈಜೋಡಿಸಿ ದೇವಾಲಯದ ಅಭಿವೃದ್ಧಿಗೆ ಶ್ರಮಿಸುವ ಮೂಲಕ ಮುಂದಿನ ಪೀಳಿಗೆಗೂ ನಮ್ಮ ಧಾರ್ಮಿಕ ಪರಂಪರೆಯನ್ನು ಉಳಿಸಿ ಬೆಳೆಸಬೇಕು ಎಂದು ಹೇಳಿದರು. ದೇವಾಲಯದ ಧಾರ್ಮಿಕ ಚಟುವಟಿಕೆಗಳಲ್ಲಿ ಮಕ್ಕಳು ಹಾಗೂ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಪೋಷಕರು ಪ್ರೋತ್ಸಾಹಿಸಬೇಕು. ಭಕ್ತಿ, ಸಂಸ್ಕಾರ, ಮಾನವೀಯತೆ ಹಾಗೂ ಸೇವಾ ಮನೋಭಾವವನ್ನು ಬೆಳೆಸಿಕೊಂಡು ಸಮಾಜದ ಒಳಿತಿಗೆ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದರು.

ಮಾಜಿ ಕೌಶಲ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಹಾಗೂ ಹಾಲಪ್ಪ ಪ್ರತಿಷ್ಠಾನದ ಅಧ್ಯಕ್ಷ ಮುರಳಿಧರ ಹಾಲಪ್ಪ ಮಾತನಾಡಿ ದೇವಸ್ಥಾನದ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುತ್ತಿರುವುದು ಸಂತಸದ ಸಂಗತಿಯಾದರೂ, ಮಕ್ಕಳು, ಯುವಕರು ಹಾಗೂ ಪುರುಷರೂ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತಾಗಬೇಕು. ಮುಂದಿನ ಪೀಳಿಗೆಗೆ ನಮ್ಮ ಧಾರ್ಮಿಕ ಹಾಗೂ ಸಾಂಸ್ಕೃತಿಕ ಪರಂಪರೆಯನ್ನು ಪರಿಚಯಿಸುವ ಜವಾಬ್ದಾರಿ ಎಲ್ಲರ ಮೇಲಿದೆ ಎಂದು ಹೇಳಿದರು. ಹಳೇತಿಮ್ಮನಹಳ್ಳಿಯ ಪುರಾತನ ದೇವಾಲಯವು ಐತಿಹಾಸಿಕ ಹಿನ್ನೆಲೆಯನ್ನು ಹೊಂದಿದ್ದು, ಗ್ರಾಮಸ್ಥರ ಒಗ್ಗಟ್ಟಿನ ಪ್ರಯತ್ನದಿಂದ ಇದೀಗ ಸುಂದರವಾಗಿ ಜೀರ್ಣೋದ್ಧಾರಗೊಂಡಿದೆ. ದೇವಸ್ಥಾನದೊಂದಿಗೆ ಯುವಜನರನ್ನು ಮತ್ತಷ್ಟು ಬೆಸೆಯಲು ಎಸ್‌ಎಸ್‌ಎಲ್‌ಸಿ, ಪಿಯುಸಿ ಹಾಗೂ ಪದವಿ ಪರೀಕ್ಷೆಗಳಲ್ಲಿ ಉತ್ತಮ ಸಾಧನೆ ಮಾಡುವ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಪ್ರೋತ್ಸಾಹಿಸುವ ಕಾರ್ಯ ಕೈಗೊಳ್ಳಬೇಕು. ಇಂತಹ ವಿದ್ಯಾರ್ಥಿ ಪ್ರೋತ್ಸಾಹ ಕಾರ್ಯಕ್ರಮಗಳಿಗೆ ಮಹಾಲಕ್ಷ್ಮೀ ಪ್ರತಿಷ್ಠಾನದ ವತಿಯಿಂದ, ತಮ್ಮ ತಂದೆ ಡಾ. ಹಾಲಪ್ಪ ಅವರ ಹೆಸರಿನಲ್ಲಿ ಅಗತ್ಯ ಸಹಕಾರ ನೀಡುವುದಾಗಿ ತಿಳಿಸಿದರು. ದೇವಸ್ಥಾನ ಹಾಗೂ ಧಾರ್ಮಿಕ ಕಾರ್ಯಗಳ ಮೂಲಕ ಯುವಜನರಲ್ಲಿ ಉತ್ತಮ ಸಂಸ್ಕಾರ, ಭಕ್ತಿ ಹಾಗೂ ಸಾಮಾಜಿಕ ಜವಾಬ್ದಾರಿ ಬೆಳೆಸಬೇಕು.

ಗ್ರಾಮಸ್ಥರು ಯಾವುದೇ ಸಮಸ್ಯೆಗಳನ್ನು ಹೊಂದಿದ್ದರೂ ಶ್ರೀಮಠದ ಹನುಮಂತನಾಥ ಮಹಾಸ್ವಾಮೀಜಿಯವರ ಮಾರ್ಗದರ್ಶನ ಪಡೆದು ಪರಿಹಾರದತ್ತ ಸಾಗಬಹುದು ಎಂದು ಮುರಳೀಧರ ಹಾಲಪ್ಪ ಹೇಳಿದರು.

ಪುರಾತನ ದೇವಾಲಯವು ಗ್ರಾಮಸ್ಥರ ಭಕ್ತಿ ಹಾಗೂ ಒಗ್ಗಟ್ಟಿನಿಂದ ಜೀರ್ಣೋದ್ಧಾರಗೊಂಡಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ಅಭಿವೃದ್ಧಿ ಹೊಂದಬೇಕು. ದೇವಸ್ಥಾನದ ಅಭಿವೃದ್ಧಿ ಹಾಗೂ ಧಾರ್ಮಿಕ ಚಟುವಟಿಕೆಗಳಿಗೆ ಗ್ರಾಮಸ್ಥರು ಮತ್ತು ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಕೈಜೋಡಿಸಬೇಕು ಎಂದು ಮನವಿ ಮಾಡಿದರು.

ಈ ವೇಳೆಯಲ್ಲಿದ ಕೊಂಡವಾಡಿ ಚಂದ್ರಶೇಖರ್, ಹಾಗೂ ಭಕ್ತಾದಿಗಳು ಹಳೇತಿಮ್ಮನಹಳ್ಳಿ ಗ್ರಾಮಸ್ಥರು ಹಾಗೂ ಸುತ್ತಮುತ್ತಲಿನ ಗ್ರಾಮಸ್ಥರು ಮತ್ತಿತರರಿದ್ದರು.

# 24 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಹನಿ ನೀರಾವರಿ ವಿಫಲ




ಬೆಂಗಳೂರು: ಉತ್ತರ ಕರ್ನಾಟಕದ ಜೀವನಾಡಿಯಾದ ಕೃಷ್ಣಾ ಭಾಗ್ಯ ಜಲ ನಿಗಮದ (KBJNL) ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಲಸಂಪನ್ಮೂಲ ಸಚಿವ ಎನ್. ಚಲುವರಾಯಸ್ವಾಮಿ ಅವರು ಅಧಿಕಾರಿಗಳಿಗೆ ಖಡಕ್ ಎಚ್ಚರಿಕೆ ನೀಡಿ, ಕಳಪೆ ಕಾಮಗಾರಿ ಸಹಿಸುವುದಿಲ್ಲ, ಗುಣಮಟ್ಟದಲ್ಲಿ ರಾಜಿ ಇಲ್ಲ ಎಂದು ಎಚ್ಚರಿಕೆ ನೀಡಿದರು. ಏಃಎಓಐ ವ್ಯಾಪ್ತಿಯ ವಿಜಯಪುರ, ಬಾಗಲಕೋಟೆ, ರಾಯಚೂರು, ಯಾದಗಿರಿ, ಕಲಬುರಗಿ, ಕೊಪ್ಪಳ, ಗದಗ ಸೇರಿದಂತೆ 7 ಜಿಲ್ಲೆ, 5 ವಲಯ, 46 ತಾಲೂಕು, 33 ವಿಧಾನಸಭಾ ಕ್ಷೇತ್ರಗಳ ಬೃಹತ್ ವ್ಯಾಪ್ತಿಯ ಸಮಗ್ರ ಮಾಹಿತಿ, ಸಿಬ್ಬಂದಿ ವಿವರ, ಕೆರೆ ತುಂಬಿಸುವ ಯೋಜನೆಗಳ ಬಗ್ಗೆ ಮಂಗಳವಾರ ನಡೆದ ಸಭೆಯಲ್ಲಿ ಸಚಿವರು ಮಾಹಿತಿ ಪಡೆದರು.

ಗುತ್ತಿಗೆದಾರರ ವಿರುದ್ಧ ಕ್ರಮ: 24 ಸಾವಿರ ಹೆಕ್ಟೇರ್ ಪ್ರದೇಶಕ್ಕೆ ಒದಗಿಸಲಾದ ಹನಿ ನೀರಾವರಿ ನಿರೀಕ್ಷಿತ ಯಶಸ್ಸು ಕಾಣದಿರುವ ಬಗ್ಗೆ ಸಚಿವರು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಗುತ್ತಿಗೆ ಪಡೆದವರು ಸರಿಯಾಗಿ ನೀರು ಪೂರೈಸುತ್ತಿಲ್ಲ, 5 ವರ್ಷಗಳ ನಿರ್ವಹಣಾ ನಿಯಮ ಉಲ್ಲಂಘಿಸುತ್ತಿದ್ದಾರೆ ಎಂದು ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳೊಂದಿಗೆ ಖುದ್ದು ಸ್ಥಳ ಪರಿಶೀಲನೆ ನಡೆಸುವುದಾಗಿ ತಿಳಿಸಿದರು.

ಕೇವಲ ನ್ಯಾಯಾಲಯದ ನೆಪವೊಡ್ಡಿ ಕಾಮಗಾರಿ ವಿಳಂಬ ಮಾಡುವುದನ್ನು ಸಹಿಸುವುದಿಲ್ಲ. ಪ್ರತಿಯೊಂದು ಸಮಸ್ಯೆಗೂ ತ್ವರಿತ ಪರಿಹಾರ ಒದಗಿಸಲೇಬೇಕು ಎಂದು ಸಚಿವರು ಖಡಕ್ ನಿರ್ದೇಶನ ನೀಡಿದರು.

ಗಏಕ–3 ಗೆ 1.33 ಲಕ್ಷ ಹೆಕ್ಟೇರ್ ಭೂಸ್ವಾಧೀನ: ಕೃಷ್ಣಾ ಮೇಲ್ದಂಡೆ ಯೋಜನೆ (UKP–3) ಗಾಗಿ ಕಾಲುವೆ ಮತ್ತು ಹಳ್ಳಿಗಳು ಸೇರಿ ಒಟ್ಟು 1,33,887 ಹೆಕ್ಟೇರ್ ಭೂಸ್ವಾಧೀನದ ಬೃಹತ್ ಸವಾಲು ಇದ್ದು, ಇದರಿಂದ 100 ಟಿಎಂಸಿ ನೀರು ಶೇಖರಣೆ ಸಾಧ್ಯ. 184 ಗ್ರಾಮಗಳ ಪೈಕಿ 87 ಗ್ರಾಮಗಳಿಗೆ ಶೀಘ್ರ ನೋಟಿಫಿಕೇಷನ್ ಹೊರಡಿಸುವ ಪ್ರಕ್ರಿಯೆಯಲ್ಲಿ ಎದುರಾಗುವ ರಾಜಕೀಯ ಮತ್ತು ಸ್ಥಳೀಯ ಶಾಸಕರ ಒತ್ತಡಗಳಿಗೆ ಮಣಿಯಬೇಡಿ. ಕಾನೂನು ಪ್ರಕಾರವೇ ಭೂಸ್ವಾಧೀನ ನಡೆಯಬೇಕು.

## ಗುತ್ತಿಗೆದಾರರ ವಿರುದ್ಧ ಕ್ರಮಕ್ಕೆ ಸಚಿವ ಚಲುವರಾಯಸ್ವಾಮಿ ಸೂಚನೆ

ಈ ಕುರಿತು ಪ್ರಾದೇಶಿಕ ಆಯುಕ್ತರು ಮತ್ತು ಜನರಲ್ ಮ್ಯಾನೇಜರ್ ಜೊತೆ ವಿಶೇಷ ಸಭೆ ನಡೆಸುವುದಾಗಿ ತಿಳಿಸಿದರು.

UKP 1,2,3 ಹಂತದ ಕೋರ್ಟ್ ಕೇಸ್‌ಗಳನ್ನು ಶೀಘ್ರ ಇತ್ಯರ್ಥಪಡಿಸಲು ಪ್ರತ್ಯೇಕ ಕಡತ ಸಿದ್ಧಪಡಿಸಿ ಆರ್ಥಿಕ ನೆರವು ನೀಡಲಾಗುವುದು. ವಿಜಯಪುರ ಭಾಗದ ತೋಟಗಾರಿಕಾ ರೈತರಿಗೆ ನೀರಿನ ಕೊರತೆಯಾಗದಂತೆ ನೋಡಿಕೊಳ್ಳುವಂತೆ ಸೂಚಿಸಿದರು.

ನಂದವಾಡಗಿ, ಕೆರೂರು, ಬೂದಿಹಾಳ, ಭಗವತಿ, ಪಾಮನಕಲ್ಲೂರು, ಚಡಚಣ ಸೇರಿದಂತೆ ಏತ ನೀರಾವರಿ ಯೋಜನೆಗಳಿಗೆ ವೇಗ ನೀಡಬೇಕು, ಸ್ಥಗಿತಗೊಂಡ ಕಾಮಗಾರಿಗಳಿಗೆ ಮರು ಟೆಂಡರ್ ಕರೆದು ಸಾರ್ವಜನಿಕ ಹಣ ಪೋಲಾಗದಂತೆ ನೋಡಿಕೊಳ್ಳಬೇಕು. ಕೇಂದ್ರದಿಂದ ಬರಬೇಕಾದ ಅನುದಾನ ತರಲು ಶ್ರಮಿಸಬೇಕು. ನಾರಾಯಣಪುರ ಎಡದಂಡೆ ಕಾಲುವೆಯಲ್ಲಿ ಯಾಂತ್ರೀಕೃತ ಗೇಟ್ ಅಳವಡಿಸಿ ನೀರಿನ ದಕ್ಷತೆ ಹೆಚ್ಚಿಸಿರುವುದು ಹಾಗೂ ರೈತರು ಆ?ಯಪ್ ಮೂಲಕ ನೀರಿನ ಬೇಡಿಕೆ ಸಲ್ಲಿಸುವ ವ್ಯವಸ್ಥೆಯನ್ನು ಶ್ಲಾಘಿಸಿದರು.

ಕಳ್ಳಾಟ ಬಯಲಾದರೆ ಸುಮ್ಮನೆ ಬಿಡಲ್ಲ: "ಯಾವುದೇ ಸೇತುವೆ ಅಥವಾ ಕಾಮಗಾರಿಯ ಗುಣಮಟ್ಟದಲ್ಲಿ ರಾಜಿ ಇಲ್ಲ, ಅಂದಾಜು ಪಟ್ಟಿ ತಯಾರಿಸುವಾಗ ಎಚ್ಚರಿಕೆ ವಹಿಸಿ. ನಾನು ಪರಿಶೀಲನೆ ನಡೆಸಿದಾಗ ಅಧಿಕಾರಿಗಳ ಕಳ್ಳಾಟ ಬಯಲಾದರೆ ಸುಮ್ಮನೆ ಬಿಡುವ ಪ್ರಶ್ನೆಯೇ ಇಲ್ಲ. ಜಿಲ್ಲಾಡಳಿತಕ್ಕೆ ನೀಡಿದ ಸರ್ಕಾರಿ ಹಣದ ನಯಾ ಪೈಸೆಯೂ ದುರ್ಬಳಕೆಯಾಗಬಾರದು ಎಂದು ನೇರ ಎಚ್ಚರಿಕೆ ನೀಡಿದರು.

**ಗುತ್ತಿಗೆದಾರರಿಗೆ ಭರವಸೆ:** ನಂತರ ಗುತ್ತಿಗೆದಾರರೊಂದಿಗೆ ಸಮಾಲೋಚನೆ ನಡೆಸಿದ ಸಚಿವರು, ಅನುದಾನ ಬಿಡುಗಡೆ, ಶೇ.50 ಶೇವಣಿ, ಕಾರ್ಯಾದೇಶ ವಿಳಂಬ ಸಮಸ್ಯೆಗಳನ್ನು ಆಲಿಸಿ, "ನಾನು ಕೂಡ ಈ ಹಿಂದೆ ಗುತ್ತಿಗೆದಾರನಾಗಿದ್ದೆ, ನಿಮ್ಮ ಸಮಸ್ಯೆಗಳ ಅರಿವು ನನಗಿದೆ, ಶೀಘ್ರ ಬಗೆಹರಿಸುತ್ತೇನೆ ಎಂದು ಸಚಿವರು ಭರವಸೆ ನೀಡಿದರು.

Printed By: J AMBRISH, DEVANAHALLI TQ, BANGALORE RURAL DIST. PRINTED AT: KALYANI PRINTERS, GROUND FLOOR, FLAT NO. 12/1, 1ST CROSS ROAD, MYSURE ROAD, OLD TOLLGATE, NEAR BY GOPALAN MALL, BENGALURU, KARNATAKA-560026. Published & owned by RADHIKA A. R., D/O RAMAKRISHNAIAH, BEHAIND AC OFFICE, SWEET WATER BOREWELL ROAD, MADHUGIRI TALUK, TUMAKURU DIST. KARNATAKA PIN-572132, and published at TUMAKURU. BEHAIND AC OFFICE, SWEET WATER BORE WELL ROAD, MADHUGIRI, MADHUGIRI TALUK, TUMAKURU. DIST. KARNATAKA PIN-572132 Editor: RADHIKA A.R. ``KARNATAKA SUCCESS NO 1 '' KANNADA Daily News Paper